ಸಂಪುಟ: 06 ಸಂಚಿಕೆ: 181 ಪುಟಗಳು: 08 ಶನಿವಾರ 12 ಸೆಪ್ಟೆಂಬರ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಅಗತ್ಯ ಇದ್ದಾಗ ಬರುವವರನ್ನು ಎಂದೂ ನಂಬಬೇಡ.. ಬೇಕಾದಾಗ ಬರುವವರ ಹಿಂದೆ ಎಂದೂ ಹೋಗಬೇಡ.. ಬೇಡ ಅಂತ ಹೋದವರನ್ನು ನೆನಪಿಸಿ ಕೊರಗಬೇಡ.. ನಿನ್ನ ನಂಬಿ ಬಂದವರನ್ನ ಕೊನೆವರೆಗೂ ಕೈ ಬಿಡಬೇಡ..

## ಸಿದ್ದರಾಮಯ್ಯನವರಿಗೆ ಅಸಮಾಧಾನವಿದ್ದಿದ್ದರೆ ರಾಜೀನಾಮೆಯನ್ನೇ ಕೊಡುತ್ತಿರಲಿಲ್ಲ: ಡಿಸಿಎಂ ಪರಮೇಶ್ವರ್

• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯನವರ ದೆಹಲಿ ಭೇಟಿ ಹಿಂದೆ ಯಾವುದೇ ಅಸಮಾಧಾನದ ಕಾರಣಗಳಿಲ್ಲ. ಹಾಗೊಂದು ವೇಳೆ ಅಸಮಾಧಾನ ಇದ್ದಿದ್ದರೆ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆಯನ್ನೇ ಕೊಡುತ್ತಿರಲಿಲ್ಲ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದರು. ಸದಾಶಿವನಗರದ ತಮ್ಮ ನಿವಾಸದ ಬಳಿ ಮಾತನಾಡಿದ ಅವರು, ಹೈಕಮಾಂಡ್ ಹೇಳಿದಂತೆ ನಡೆದುಕೊಳ್ಳುವುದಾಗಿ ಸಿದ್ದರಾಮಯ್ಯನವರು ಮೊದಲಿನಿಂದಲೂ ಹೇಳುತ್ತ ಬಂದಿದ್ದರು. ಅದರಂತೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದಾರೆ.

ಇದು ಮುಗಿದು ಹೋದ ಅಧ್ಯಾಯ. ಪುನಃ ಪುನಃ ಚರ್ಚೆ ಮಾಡುವುದರಲ್ಲಿ ಅರ್ಥವಿಲ್ಲ. ಸಿದ್ದರಾಮಯ್ಯ ಅವರು ಪ್ರಸ್ತುತ ಕಾಂಗ್ರೆಸ್ ಕಾರ್ಯಕಾರಿಣಿ ಸಮಿತಿ ಸದಸ್ಯರಾಗಿರುವುದರಿಂದ ದೆಹಲಿ ಭೇಟಿ ಸಹಜ ಪ್ರಕ್ರಿಯೆಯಾಗಿದೆ. ಅದಕ್ಕೆ ಬೇರೆ ಅರ್ಥಗಳನ್ನು ಕಲ್ಪಿಸಬಾರದು ಎಂದರು. ಅವಿರೋಧವಾಗಿ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರನ್ನು ಆಯ್ಕೆ ಮಾಡಬೇಕು, ಚುನಾವಣೆ ನಡೆಸುವುದು ಬೇಡ ಎಂಬುದು ನಮ್ಮ ಪಕ್ಷದ ನಿರ್ಧಾರವಾಗಿತ್ತು. ಹಾಗಾಗಿ ಕೊನೆಯ ಹಂತದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್. ರವಿ ಅವರನ್ನು ಆಯ್ಕೆ ಮಾಡಲಾಗಿದೆ. ನಿರ್ಣಾಯಕ ಸಭೆಯಲ್ಲಿ ಕೆ. ಎನ್. ರಾಜಣ್ಣ ಅವರೂ ಹಾಜರಿದ್ದರು. ಅವರ ಸಮ್ಮತಿ ಮೇರೆಗೆ ಅಧ್ಯಕ್ಷರ ಆಯ್ಕೆ ನಡೆದಿದೆ. ಅಸಮಾಧಾನದ ಪ್ರಶ್ನೆ ಉದ್ಭವಿಸುವುದಿಲ್ಲ ಎಂದು ಹೇಳಿದರು. ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರ ಹುದ್ದೆಯನ್ನು 2.5–2.5 ವರ್ಷಗಳ ಅಧಿಕಾರ ಸೂತ್ರದಲ್ಲಿ ಆಯ್ಕೆ ಮಾಡಲಾಗಿದೆ ಎನ್ನಲಾಗುತ್ತಿದೆ.

## ದಸರಾ ಗಜಪಡೆಯ ತಾಲೀಮು ನೋಡಲು ಜನಸಾಗರ

• ಉದಯವಾಹಿನಿ, ಬೆಂಗಳೂರು

ದಸರಾದ ಪ್ರಮುಖ ಆಕರ್ಷಣೆಯಾದ ಗಜಪಡೆಯ ತಾಲೀಮು ಭರದಿಂದ ಸಾಗಿದೆ. ಈ ತಾಲೀಮು ನೋಡಲು ಜಂಬೂ ಸವಾರಿ ಮಾರ್ಗದಲ್ಲಿ ಜನಸಾಗರವೇ ಸೇರುತ್ತಿದ್ದು, ರೀಲ್ಸ್ ಮಾಡುವವರಿಂದ ಅಧಿಕಾರಿಗಳಿಗೆ ವಿಚಿತ್ರ ಮುಜುಗರ ಉಂಟಾಗುತ್ತಿರುವುದು ಕಂಡುಬರುತ್ತಿದೆ. ಈ ಬಗ್ಗೆ ಅರಣ್ಯ ಇಲಾಖೆಯು ವಿಡಿಯೋ ಬಿಡುಗಡೆ ಮಾಡುವ ಮೂಲಕ ಆನೆಗಳಿಂದ ದೂರ ಇರುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದೆ. ರಾಜಬೀದಿಯಲ್ಲಿ ಬೆಳಗ್ಗೆ ಮತ್ತು ಸಂಜೆ ನಡೆಯುತ್ತಿರುವ ಆನೆಗಳ ತಾಲೀಮು ವೀಕ್ಷಿಸಲು ಪ್ರತಿದಿನ ಜನಸಾಗರವೇ ಇಲ್ಲಿ ಸೇರುತ್ತಿದೆ. ಅರಮನೆಯ ಬಲರಾಮ ದ್ವಾರದಿಂದ ಹಿಡಿದು ಕೆ.ಆರ್. ಸರ್ಕಲ್, ದೇವರಾಜ ಮಾರುಕಟ್ಟೆ ಹಾಗೂ ಆಯುರ್ವೇದಿಕ್ ವೃತ್ತದವರೆಗೆ ರಸ್ತೆಯ ಎರಡೂ ಬದಿಯಲ್ಲೂ ಜನ ಕಿಕ್ಕಿರಿದು ನಿಂತಿರುತ್ತಾರೆ. ಆನೆಗಳ ತಾಲೀಮಿನ ದೃಶ್ಯ ತಮ್ಮ ಮೊಬೈಲ್‌ನಲ್ಲಿ ಸೆರೆಹಿಡಿಯುವುದು, ಅವುಗಳೊಂದಿಗೆ ಸೆಲ್ಫಿ ತೆಗೆದುಕೊಂಡು ರೀಲ್ಸ್ ಮಾಡುತ್ತಿರುವುದು ಇತರೆ ಅತಿರೇಕದ ವರ್ತನೆಗಳು ಕಂಡುಬರುತ್ತಿದ್ದು, ಅರಣ್ಯ ಅಧಿಕಾರಿಗಳ ಆತಂಕಕ್ಕೆ ಕಾರಣವಾಗಿದೆ. ಕೆಲವರು ಗಜಪಡೆಯ ತಾಲೀಮಿನ ವಿಡಿಯೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಳ್ಳುತ್ತಿದ್ದು, ಈ ಜಾಲತಾಣಗಳ ಪ್ರಭಾವದಿಂದ ಈ ಬಾರಿ ಆನೆಗಳ ತಾಲೀಮು ನೋಡಲು ಇಲ್ಲಿಗೆ ಆಗಮಿಸುವವರ ಸಂಖ್ಯೆ ಹೆಚ್ಚಾಗಿರುವಂತೆ ಕಂಡುಬರುತ್ತಿದೆ. ರಾಜ್ಯ ,ಹೊರ ರಾಜ್ಯಗಳಿಂದ ಈ ದೃಶ್ಯ ಕಾಣಲು ಆಗಮಿಸುತ್ತಿದ್ದು, ಆನೆಗಳ ಬಳಿಯಲ್ಲಿಯೇ ನಿಂತು ರೀಲ್ಸ್ ಮಾಡುವವರ ಸಂಖ್ಯೆ ಕೂಡ ಹೆಚ್ಚಾಗಿದೆ.

## ಸಿದ್ದರಾಮಯ್ಯಗೆ ರಾಹುಲ್ ಸಲಹೆ

• ಉದಯವಾಹಿನಿ, ಬೆಂಗಳೂರು

ರಾಜಕೀಯ ನಿವೃತ್ತಿ ಕುರಿತು ಸಾರ್ವಜನಿಕವಾಗಿ ಪದೇಪದೇ ಹೇಳಿಕೆ ನೀಡದಂತೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮಹತ್ವದ ಸಲಹೆ ನೀಡಿದ್ದಾರೆ.

ದೆಹಲಿ ಭೇಟಿ ವೇಳೆ ರಾಹುಲ್ ಗಾಂಧಿ ಅವರನ್ನು ಭೇಟಿಯಾದ ಸಿದ್ದರಾಮಯ್ಯ ಅವರೊಂದಿಗೆ ರಾಜ್ಯ ರಾಜಕೀಯ ವಿದ್ಯಮಾನಗಳ ಕುರಿತು ಚರ್ಚಿಸಲಾಯಿತು. ಈ ವೇಳೆ ರಾಜಕೀಯ ನಿವೃತ್ತಿ ಬಗ್ಗೆ ಸಾರ್ವಜನಿಕವಾಗಿ ಪದೇಪದೇ ಮಾತನಾಡುವುದರಿಂದ ಪಕ್ಷದ ಕಾರ್ಯಕರ್ತರಲ್ಲಿ ಗೊಂದಲ ಮೂಡುವುದರ ಜೊತೆಗೆ ಸಾರ್ವಜನಿಕ ವಲಯಕ್ಕೂ ತಪ್ಪು ಸಂದೇಶ ರವಾನೆಯಾಗುವ ಸಾಧ್ಯತೆ ಇದೆ. ಆದ್ದರಿಂದ ಮುಂದಿನ ದಿನಗಳಲ್ಲಿ ಇಂತಹ ಬಹಿರಂಗ ಹೇಳಿಕೆಗಳನ್ನು ನೀಡದಿರುವುದು ಸೂಕ್ತ ಎಂದು ರಾಹುಲ್ ಸಲಹೆ ನೀಡಿರುವ ವಿಚಾರ ಮೂಲಗಳಿಂದ ತಿಳಿದು ಬಂದಿದೆ. ರಾಹುಲ್ ಅವರ ಸಲಹೆಗೆ ಸಕಾರಾತ್ಮಕವಾಗಿ ಉತ್ತರಿಸಿದ ಸಿದ್ದರಾಮಯ್ಯ, ತಮ್ಮ ಹೇಳಿಕೆಯ ಹಿಂದಿನ ಸ್ಪಷ್ಟ ಉದ್ದೇಶವನ್ನು ವಿವರಿಸಿದ್ದಾರೆ.

## ಗೌರಿ-ಗಣೇಶ ಹಬ್ಬಕ್ಕೆ ಪ್ರಯಾಣಿಕರಿಗೆ ಸಿಹಿಸುದ್ದಿ

• ಉದಯವಾಹಿನಿ, ಬೆಂಗಳೂರು

ಗೌರಿ ಗಣೇಶ ಹಬ್ಬದ ಹಿನ್ನೆಲೆ ಊರುಗಳಿಗೆ ತೆರಳುವ ಪ್ರಯಾಣಿಕರ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಭರ್ಜರಿ ಸಿದ್ಧತೆ ಮಾಡಿಕೊಂಡಿದೆ. ಪ್ರಯಾಣಿಕರ ದಟ್ಟಣೆ ಗಮನದಲ್ಲಿಟ್ಟುಕೊಂಡು ರಾಜ್ಯದ ವಿವಿಧ ಜಿಲ್ಲೆಗಳು ಹಾಗೂ ಹೊರರಾಜ್ಯಗಳಿಗೆ 2,400 ವಿಶೇಷ ಬಸ್‌ಗಳ ವ್ಯವಸ್ಥೆ ಮಾಡಿರುವುದಾಗಿ ತಿಳಿಸಿದೆ. ಹೆಚ್ಚುವರಿಯಾಗಿ 270 ರಿಸರ್ವೇಶನ್ ಬಸ್‌ಗಳನ್ನ ನಿಯೋಜಿಸಲಾಗಿದ್ದು, ಬೆಂಗಳೂರಿನಲ್ಲಿ 240 ಬಿಎಂಟಿಸಿ ಬಸ್‌ಕಾರ್ಯಾಚರಣೆಗೆ ಸಿದ್ಧವಾಗಿರಿಸಲಾಗಿದೆ. ಸೆಪ್ಟೆಂಬರ್ 11ರಿಂದ ಸೆಪ್ಟೆಂಬರ್ 13ರ ವರೆಗೆ ಬೆಂಗಳೂರಿನಿಂದ ವಿವಿಧ ಜಿಲ್ಲೆಗಳು ಹಾಗೂ ಹೊರರಾಜ್ಯಗಳಿಗೆ ವಿಶೇಷ ಬಸ್‌ಗಳು ಸಂಚರಿಸಲಿವೆ. ಮೆಜೆಸ್ಟಿಕ್, ಸ್ಯಾಟಲೈಟ್ (ಮೈಸೂರು ರಸ್ತೆ) ಹಾಗೂ ಶಾಂತಿನಗರ ಬಸ್ ನಿಲ್ದಾಣಗಳಿಂದ ಹೆಚ್ಚುವರಿ ಸೇವೆಗಳನ್ನು ನಿರ್ವಹಿಸಲಾಗುತ್ತದೆ. ಮಂಗಳೂರು, ಶಿವಮೊಗ್ಗ, ಹುಬ್ಬಳ್ಳಿ, ಬೆಳಗಾವಿ, ವಿಜಯಪುರ, ಕಲಬುರಗಿ ಸೇರಿದಂತೆ ಪ್ರಯಾಣಿಕರ ಬೇಡಿಕೆ ಹೆಚ್ಚಿರುವ ಹಲವು ಪ್ರಮುಖ ಮಾರ್ಗಗಳಿಗೆ ಹೆಚ್ಚುವರಿ ಬಸ್‌ಗಳನ್ನು ನಿಯೋಜಿಸಲಾಗಿದೆ.




# ಪಾಕ್ ಹಿಂದಿಕ್ಕಿದ ಭಾರತ

• ಉದಯವಾಹಿನಿ, ದೆಹಲಿ

ಅಣ್ವಸ್ತ್ರ ಸಿಡಿತಲೆ ಹೊಂದುವಲ್ಲಿ ಪಾಕಿಸ್ತಾನವನ್ನು ಭಾರತ ಹಿಂದಿಕ್ಕಿದೆ. ಅಮೆರಿಕ ಮೂಲದ 'ಫೆಡರೇಶನ್ ಆಫ್ ಅಮೆರಿಕನ್ ಸೈಂಟಿಸ್ಟ್ಸ್ ನಡೆಸಿದ ಹೊಸ ಅಧ್ಯಯನದ ಪ್ರಕಾರ, ಭಾರತವು 190 ಪರಮಾಣು ಸಿಡಿತಲೆಗಳನ್ನು ಹೊಂದಿರುವ ಅಂದಾಜಿದೆ. ಇದು ಪಾಕಿಸ್ತಾನಕ್ಕಿಂತ ಸುಮಾರು 20ರಷ್ಟು ಹೆಚ್ಚಾಗಿದೆ. ಭಾರತದ ಪರಮಾಣು ಶಸ್ತ್ರಾಸ್ತ್ರಗಳು–2026' ಎಂಬ ಶೀರ್ಷಿಕೆಯ ಲೇಖನವೊಂದರಲ್ಲಿ ಎಫ್‌ಎಎಸ್ ಪರಮಾಣು ಮಾಹಿತಿ ಯೋಜನೆಯ ನಿರ್ದೇಶಕ ಹ್ಯಾನ್ಸ್ ಕ್ರಿಸ್ಟೆನ್ಸೆನ್ ಅವರು, ಭಾರತವು ಕಾರ್ಯಾಚರಣೆಗೆ ಸಿದ್ಧವಿರುವ ಉಡಾವಣಾ ವ್ಯವಸ್ಥೆಗಳಿಗಾಗಿ 160ಕ್ಕೂ ಹೆಚ್ಚು ಸಿಡಿತಲೆಗಳನ್ನು ಹೊಂದಿದೆ. ಉತ್ಪಾದನೆಯ ಹಂತದಲ್ಲಿರುವ ಹೊಸ ಕ್ಷಿಪಣಿ ವ್ಯವಸ್ಥೆಗಳಿಗೆ ಸಂಬಂಧಿಸಿದಂತೆ ಹೆಚ್ಚುವರಿ ಸಿಡಿತಲೆಗಳನ್ನೂ ಹೊಂದಿದೆ ಎಂದು ತಿಳಿಸಿದ್ದಾರೆ.

ಭಾರತ ದಾಸ್ತಾನು ಹೆಚ್ಚಿಸಿಕೊಳ್ಳುವ ಮೂಲಕ ಪಾಕ್‌ಗೆ ಸೆಡ್ಡು ಹೊಡೆದಿದೆ. ಭಾರತದಲ್ಲಿ ಹೊಸ ತಲೆಮಾರಿನ ಪರಿಮಾಣು ಸಹಿತ ಕ್ಷಿಪಣಿಗಳಿವೆ.

ಸದ್ಯ ಪಾಕಿಸ್ತಾನದ ಬಳಿ 170 ಅಣ್ವಸ್ತ್ರ ಸಿಡಿತಲೆಗಳಿವೆ. 2023ರಲ್ಲೇ ಪಾಕಿಸ್ತಾನವನ್ನು ಭಾರತ ಹಿಂದಿಕ್ಕಿದೆ. ಶಾಂತಿ ಪ್ರಿಯ ದೇಶವಾದ ಭಾರತ, ವಿಶ್ವದಲ್ಲೇ ಭೀಕರ ಅಸ್ತ್ರವಾದ ಅಣ್ವಸ್ತ್ರದ (ಪರಮಾಣು ಸಿಡಿತಲೆ) ದಾಸ್ತಾನುವನ್ನು ದೊಡ್ಡ ಮಟ್ಟದಲ್ಲಿ ಹೆಚ್ಚಳ ಮಾಡಿಕೊಳ್ಳುತಿದೆ. ಎಷ್ಟರ ಮಟ್ಟಿಗೆ ಅಂದರೆ, ಇತಿಹಾಸದಲ್ಲೇ ಮೊದಲ ಬಾರಿಗೆ ಸಾಂಪ್ರದಾಯಿಕ ವೈರಿ ಪಾಕಿಸ್ತಾನಕ್ಕಿಂತಲೂ ಹಚ್ಚಿನ ಅಣ್ವಸ್ತ್ರದ ದಾಸ್ತಾನುವನ್ನು ಇಟ್ಟುಕೊಂಡಿದೆ. ಜಾಗತಿಕ ಮಟ್ಟದಲ್ಲಿ ಶಸ್ತ್ರಾಸ್ತ್ರಗಳ ಮೇಲೆ ನಿಗಾ ಇಡುವ ಸ್ವೀಡನ್ ಮೂಲದ ಸ್ಟಾಕ್‌ಹೋಮ್ ಇಂಟರ್ನ್ಯಾಷನಲ್ ಪೀಸ್ ರಿಸರ್ಚ್ ಇನ್‌ಸ್ಟಿಟ್ಯೂಟ್ ಮತ್ತು ಅಮೆರಿಕದ ಫೆಡರೇಶನ್ ಆಫ್ ಅಮೆರಿಕನ್ ಸೈಂಟಿಸ್ಟ್ಸ್ ಬಿಡುಗಡೆ ಮಾಡಿರುವ ಹೊಸ ವರದಿಯಲ್ಲಿ ಈ ಮಹತ್ವದ ಮಾಹಿತಿ ಬಹಿರಂಗವಾಗಿದೆ.

### ಬದಲಾದ ಕಾರ್ಯತಂತ್ರ

ಭಾರತ ತನ್ನ ಅಣ್ವಸ್ತ್ರದ ದಾಸ್ತಾನುವನ್ನು ಹೆಚ್ಚಿಸಿಕೊಳ್ಳೋಕೆ ಬಹು ದೊಡ್ಡ ಕಾರಣ ಚೀನಾ! ಹೌದು, ಸಾಮಾನ್ಯವಾಗಿ, ಭಾರತವು ಇಷ್ಟು ದಿನ ಪಾಕಿಸ್ತಾನವನ್ನು ಗಮನದಲ್ಲಿಟ್ಟುಕೊಂಡು ತನ್ನ ರಕ್ಷಣಾ ವ್ಯವಸ್ಥೆ ರೂಪಿಸುತ್ತಿತ್ತು. ಆದರೆ, ಈಗ ಚೀನಾದ ಬೆದರಿಕೆಯನ್ನು ಎದುರಿಸಲು ಚೀನಾದ ಯಾವುದೇ ಮೂಲೆಯನ್ನು ತಲುಪಬಲ್ಲ, ಜಲ, ನೆಲ ಮತ್ತು ಆಕಾಶ ಮೂರೂ ಮಾರ್ಗಗಳಿಂದ ದಾಳಿ ನಡೆಸಬಲ್ಲ ಪರಮಾಣು ತ್ರಿಕೋನ ಸಾಮರ್ಥ್ಯದ ಆಧುನೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ.

ಜೊತೆಗೆ, ಭಾರತವು ಮೊದಲಿನಿಂದಲೂ ನೋ ಫಸ್ಟ್ ಯೂಸ್' ಅಣ್ವಸ್ತ್ರವನ್ನು ಮೊದಲು ಬಳಸುವುದಿಲ್ಲ) ಎಂಬ ಜವಾಬ್ದಾರಿಯುತ ರಕ್ಷಣಾ ನೀತಿಯನ್ನು ಪಾಲಿಸಿಕೊಂಡು ಬರುತ್ತಿದೆ.

### ಹಾಗಾದ್ರೆ, ಭಾರತದ ಬಳಿ ಎಷ್ಟಿದೆ ಅಣ್ವಸ್ತ್ರ?

ವರದಿಯ ಪ್ರಕಾರ, ಭಾರತವು ಪ್ರಸ್ತುತ 190 ಪರಮಾಣು ಸಿಡಿತಲೆಗಳನ್ನು ಹೊಂದಿದೆ. ಇತ್ತ, ಪಾಕಿಸ್ತಾನದ ಬಳಿ 170 ಅಣ್ವಸ್ತ್ರಗಳಿವೆ. ಈ ಮೂಲಕ ಭಾರತವು ಪಾಕಿಸ್ತಾನಕ್ಕಿಂತ 20 ಅಣ್ವಸ್ತ್ರಗಳನ್ನು ಹೆಚ್ಚು ಹೊಂದುವ ಮೂಲಕ ಮುನ್ನಡೆ ಸಾಧಿಸಿದೆ. ಅದರಲ್ಲೂ, ಭಾರತದ ಅಣ್ವಸ್ತ್ರಗಳ ಸಂಖ್ಯೆ ಹೆಚ್ಚುತ್ತಿರುವ ಪರಿಯನ್ನು ನೋಡಿದರೆ, ಜಾಗತಿಕವಾಗಿ 225 ಅಣ್ವಸ್ತ್ರಗಳನ್ನು ಹೊಂದಿರುವ ಯುನೈಟೆಡ್ ಕಿಂಗ್‌ಡಮ್ ದೇಶದ ದಾಸ್ತಾನನ್ನು ಭಾರತ ಶೀಘ್ರದಲ್ಲೇ ಹಿಂದಿಕ್ಕುವ ಸಾಧ್ಯತೆ ಇದೆ. ಭಾರತದ ಬಳಿ ಸದ್ಯ 160ಕ್ಕೂ ಹೆಚ್ಚು ಸಕ್ರಿಯ ಲಾಂಚರ್‌ಗಳಿದ್ದು, ಉತ್ಪಾದನಾ ಹಂತದಲ್ಲಿರುವ ಹೊಸ ಕ್ಷಿಪಣಿಗಳಿಗಾಗಿ ಹೆಚ್ಚುವರಿ 30 ಸಿಡಿತಲೆಗಳನ್ನು ಸಿದ್ಧಪಡಿಸಲಾಗಿದೆ.

### ಯಾವ ದೇಶದಲ್ಲಿ ಎಷ್ಟು ಅಣ್ವಸ್ತ್ರ?

ರಷ್ಯಾ 5420, ಅಮೆರಿಕಾ 5042,ಚೀನಾ 620, ಫ್ರಾನ್ಸ್ 370, ಯುನೈಟೆಡ್ ಕಿಂಗ್‌ಡಮ್ 225, ಭಾರತ 190, ಪಾಕಿಸ್ತಾನ 170, ಇಸ್ರೇಲ್ 90, ಉತ್ತರ ಕೊರಿಯಾ 60

### ಯಾವ ದೇಶದ ಬಳಿ ಎಷ್ಟಿವೆ ಅಣ್ವಸ್ತ್ರಗಳು

60. ಈ ಮೂಲಕ ವಿಶ್ವದ ಒಟ್ಟು ಅಣ್ವಸ್ತ್ರಗಳಲ್ಲಿ ಶೇ. 85 ಕ್ಕಿಂತ ಹೆಚ್ಚು ಪಾಲು ರಷ್ಯಾ ಮತ್ತು ಅಮೆರಿಕ ದೇಶಗಳ ಬಳಿಯೇ ಇವೆ. ಆದರೆ, ಈ ಪೈಕಿ, ಇಸ್ರೇಲ್ ತನ್ನ ಬಳಿ ಅಣ್ವಸ್ತ್ರ ಇರುವುದನ್ನು ಅಧಿಕೃತವಾಗಿ ಒಪ್ಪಿಕೊಳ್ಳುವುದೂ ಇಲ್ಲ, ನಿರಾಕರಿಸುವುದೂ ಇಲ್ಲ. ಆದರೆ ಜಾಗತಿಕ ರಕ್ಷಣಾ ಸಂಸ್ಥೆಗಳು ಆ ದೇಶದ ಬಳಿ ಕನಿಷ್ಠ 90 ಅಣ್ವಸ್ತ್ರ ಇರುವುದನ್ನು ಖಚಿತಪಡಿಸಿವೆ.

### ಅಮೆರಿಕದ ವಿಜ್ಞಾನಿಗಳ ಒಕ್ಕೂಟ ಬಿಡುಗಡೆ





ಭಾರತವು 190 ಅಣ್ವಸ್ತ್ರ ಸಿಡಿತಲೆಗಳನ್ನು ಹೊಂದಿದ್ದು, ಇದು ಪಾಕಿಸ್ತಾನಕ್ಕಿಂತ ಅಧಿಕ ಎಂದು ಅಮೆರಿಕದ ವಿಜ್ಞಾನಿಗಳ ಒಕ್ಕೂಟ ಬಿಡುಗಡೆ ಮಾಡಿರುವ ವರದಿ ತಿಳಿಸಿದೆ. 2023ರಲ್ಲಿ ಪಾಕ್ ಒಟ್ಟು 170 ಅಣ ಸ್ತ್ರಗಳನ್ನು ಹೊಂದಿತ್ತು. ಈಗಲೂ ಇದರ ಪ್ರಮಾಣದಲ್ಲಿ ಯಾವುದೇ ಬದಲಾವಣೆ ಕಂಡುಬಂದಿಲ್ಲ. ಭಾರತವು ಭೂಮಿಯಿಂದ, ಯುದ್ಧ ವಿಮಾನಗಳ ಮೂಲಕ ಹಾಗೂ ಯುದ್ಧ ನೌಕೆಗಳ ಮೂಲಕ ಉಡಾಯಿಸಬಹುದಾದ, ಹೊಸ ತಲೆಮಾರಿನ ಪರಮಾಣು ಸಹಿತ ಕ್ಷಿಪಣಿಗಳನ್ನು ಅಭಿವೃದ್ಧಿಪಡಿಸಿದೆ. 2026ರ ಆರಂಭದ ವೇಳೆಗೆ ಭಾರತವು ಸುಮಾರು 730 ಕೆಜಿ ಮಿಲಿಟರಿ ದರ್ಜೆಯ ಪ್ಲುಟೋನಿಯಂ ಉತ್ಪಾದಿ ಸಿದೆ. ಅದರಿಂದ 140ರಿಂದ 225 ಅಣ್ವಸ್ತ್ರಗಳನ್ನು ಭಾರತ ಹೊಂದಬಹುದಾಗಿದೆ. ಅದು ಸಾಧ್ಯವಾದರೆ, ಭಾರತದಲ್ಲಿನ ಅಣ್ವಸ್ತ್ರಗಳ ಸಂಖ್ಯೆ 225ಕ್ಕೇರಲಿದ್ದು, ಬ್ರಿಟನ್ ದೇಶವನ್ನು ಹಿಂದಿಕ್ಕಬಹುದಾಗಿದೆ. ಪ್ರಸ್ತುತ 5420 ಅಣ್ವಸ್ತ್ರದೊಂದಿಗೆ ರಷ್ಯಾ ವಿಶ್ವದಲ್ಲೇ ಅಗ್ರಸ್ಥಾನದಲ್ಲಿದೆ. 5042 ಅಣ್ವಸ್ತ್ರ ಹೊಂದಿರುವ ಅಮೆರಿಕ 2ನೇ, 620 ಅಣ್ವಸ್ತ್ರದೊಂದಿಗೆ ಚೀನ 3ನೇ ಸ್ಥಾನದಲ್ಲಿದೆ.

## ಬೆಂಗಳೂರಿನ ರಸ್ತೆ ಗುಂಡಿ ಮುಚ್ಚಲು ಬಂದ ಜೆಟ್ ಪ್ಯಾಚರ್ ಮೆಷಿನ್ ಬಗ್ಗೆ ವಿವರಿಸಿದ ಕೃಷ್ಣಬೈರೇಗೌಡ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ರಸ್ತೆ ಗುಂಡಿಗಳ ಸಮಸ್ಯೆ ಬಗೆಹರಿಯುತ್ತಿಲ್ಲ. ಹೈಕೋರ್ಟ್ ಚಾಟಿ ಬೀಸಿ ಎಚ್ಚರಿಕೆ ನೀಡಿದರೂ ಸಹ ಜಿಬಿಎ ಅಧಿಕಾರಿಗಳು ಮಾತ್ರ ಮುಚ್ಚುತ್ತೇವೆ ಎಂದು ಹೇಳಿ ಜಾರಿಕೊಳ್ಳುತ್ತಿದ್ದಾರೆ. ಇದೀಗ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಅವರು ಆಗಿದ್ದು, ಈಗಾಗಲೇ ಫುಟ್‌ಪಾತ್ ಸೇರಿಂತೆ ನಗರ ಬದಲಾವಣೆ ದಿಟ್ಟ ಹೆಜ್ಜೆ ಇಟ್ಟಿದ್ದಾರೆ. ಇದೀಗ ಬೆಂಗಳೂರಿನ ರಸ್ತೆಗಳಲ್ಲಿ ಗುಂಡಿ ಸಮಸ್ಯೆ ಬಗೆಹರಿಸಲು ಮುಂದಾಗಿದ್ದು, ಜೆಟ್ ಪ್ಯಾಚರ್ ಮೆಷಿನ್‌ಗೆ ಮೂಲಕ ಟ್ರಾಫಿಕ್ ಜಾಮ್ ಆಗದೇ ಗುಂಡಿ ಮುಚ್ಚಲು ಮುಂದಾಗಿದ್ದಾರೆ. ಹೀಗಾಗಿ ಪ್ರಯೋಗಿಕವಾಗಿ ಈ ಜೆಟ್ ಪ್ಯಾಚರ್ ಮೆಷಿನ್‌ಗೆ ಕೃಷ್ಣಬೈರೇಗೌಡ ಅವರು ಚಾಲನೆ ನೀಡಿದರು. ಇದೇ ವೇಳೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಕೃಷ್ಣಬೈರೇಗೌಡ, ಬೆಂಗಳೂರಿನ ರಸ್ತೆಗಳಲ್ಲಿ ಗುಂಡಿ ಸಮಸ್ಯೆ ವ್ಯಾಪಕವಾಗಿದೆ. ಎಲ್ಲಾ ಕಡೆಗಳಲ್ಲಿ ಒಂದೇ ಪರಿಹಾರ ಕೊಡೋಕೆ ಆಗಲ್ಲ. ಕೆಲವು ಕಡೆ ಟಾರ್ ಎದ್ದು ಹೋಗಿರುತ್ತೆ. ರಸ್ತೆ ಗುಂಡಿಗಳ ಪರಿಹಾರಕ್ಕಾಗಿ ಪ್ರಯತ್ನ ಮಾಡುತ್ತಿದ್ದೇವೆ. ಎರಡ್ಮೂರು ಇಂಚು ಗುಂಡಿ ಬಿದ್ರೆ ಮಶೀನ್ ಮೂಲಕ ಕವರ್ ಮಾಡುತ್ತೇವೆ. ಟ್ರಾಫಿಕ್ ಸಂಪೂರ್ಣ ಬಂದ್ ಮಾಡೋದು ಬೇಡ . ರಾತ್ರಿ ಹೊತ್ತು ಹೋಗಿ ಕೆಲಸ ಮಾಡೋದು ಬೇಡ. ಒಂದೇ ಮಷಿನ್‌ನಲ್ಲಿ ಟ್ರಾಫಿಕ್ ಮಧ್ಯೆ ಕೆಲಸ ಮಾಡಬಹುದು ಎಂದಿದ್ದಾರೆ. ಒಂದೇ ಮಷಿನ್ ನಲ್ಲಿ ಡಸ್ಟ್ ಕ್ಲೀನ್, ವೆಟ್ ಮಿಕ್ಸ್ ಹಾಕೋ ಮೂಲಕ ಟ್ರಾಫಿಕ್ ಸಂಪೂರ್ಣವಾಗಿ ನಿಲ್ಲಿಸದೆ ಟ್ರಾಫಿಕ್ ಮಧ್ಯೆ ಕೆಲಸ ಮಾಡಬಹುದು. ಹಾಟ್ ಮಿಕ್ಸ್ ಯಾಕೆ ಹಾಕಲ್ಲ ಅಂದ್ರೆ ಮಳೆಗಾಲ ಅಲ್ಲಿ ಹಾಕೋಕೆ ಆಗಲ್ಲ. ಟ್ರಾಫಿಕ್ ಅಲ್ಲಿ ಹಾಕೋಕೆ ಆಗಲ್ಲ. 2 ಗಂಟೆ ಟ್ರಾಫಿಕ್ ಬಿಡೋಕೆ ಆಗಲ್ಲ. ಈ ಕೆಲವು ಹೈ ಡೆನ್ಸಿಟಿ ರೋಡ್ ಗಳಲ್ಲಿ ಈ ಜೆಟ್ ಪ್ಯಾಚರ್ ಮೂಲಕ ರೋಡ್ ನಿಯಂತ್ರಣ ಮಾಡ್ತೇವೆ. ಹಾಟ್ ಮಿಕ್ಸ್ ಹಾಕೋಕೆ ರೋಲರ್ ಬೇಕು.

## ಪಾವಗಡದಲ್ಲಿ ನಕ್ಸಲ್ ಚಟುವಟಿಕೆ ಪತ್ತೆ, ಹೆಚ್ಚಿನ ಪೊಲೀಸ್ ಬಂದೋಬಸ್ತ್

• ಉದಯವಾಹಿನಿ, ಬೆಂಗಳೂರು

ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನಲ್ಲಿ ಶಂಕಿತ ನಕ್ಸಲ್ ಚಟುವಟಿಕೆಗಳು ಕಂಡು ಬಂದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿದ್ದು, ಹೆಚ್ಚಿನ ಪೊಲೀಸ್ ಬಂದೋಬಸ್ತ್ ನಿಯೋಜಿಸಲು ಮುಂದಾಗಿದೆ. ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರು, ತುಮಕೂರು ಜಿಲ್ಲೆಯ ಪಾವಗಡದಲ್ಲಿ ನಕ್ಸಲರ ಹೆಸರಿನಲ್ಲಿ ಹಣಕ್ಕೆ ಬೇಡಿಕೆ ಇಡುವ ಪತ್ರವೊಂದು ಪತ್ತೆಯಾಗಿರುವುದು ನನ್ನ ಗಮನದಲ್ಲಿದೆ. ತಾವು ತುಮಕೂರಿಗೆ ಭೇಟಿ ನೀಡುತ್ತಿದ್ದು, ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿ ಜೊತೆ ಚರ್ಚೆ ಮಾಡುತ್ತೇನೆ.

ಒಂದು ವೇಳೆ ಪತ್ರದಲ್ಲಿರುವ ಬೆದರಿಕೆ ನಿಜವಾಗಿದ್ದರೆ ಹೆಚ್ಚಿನ ಪೊಲೀಸ್ ಬಂದೋಬಸ್ತನ್ನು ವ್ಯವಸ್ಥೆ ಮಾಡುವುದಾಗಿ ಹೇಳಿದರು. ಈ ಹಿಂದೆ ತಾವು ಗೃಹಸಚಿವರಾಗಿದ್ದಾಗ ನಕ್ಸಲರ ಶರಣಾಗತಿಯಾಗಿತ್ತು. ರಾಜ್ಯವನ್ನು ನಕ್ಸಲ್ ಮುಕ್ತ ಎಂದು ಘೋಷಿಸಲಾಗಿದೆ. ಈ ಮೊದಲು ರಾಜ್ಯದಲ್ಲಿ ಅಸ್ತಿತ್ವದಲ್ಲಿದ್ದ ನಕ್ಸಲ್ ನಿಗ್ರಹ ಪಡೆಯಲ್ಲಿ ಅರ್ಧದಷ್ಟು ಬಲವನ್ನು ಹಿಂಪಡೆದು, ವಿಶೇಷ ಕ್ರಿಯಾಪಡೆ ಎಂದು ರಚಿಸಿ ಕರಾವಳಿ ಹಾಗೂ ಮಲೆನಾಡು ಜಿಲ್ಲೆಗಳಲ್ಲಿ ಶಾಂತಿ ಪಾಲನೆಗೆ ನಿಯೋಜಿಸಲಾಗಿದೆ. ಇನ್ನೂ ಅರ್ಧದಷ್ಟು ನಕ್ಸಲ್ ನಿಗ್ರಹ ಪಡೆಯ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ಕಾರ್ಕಳದಲ್ಲೇ ಇರಿಸಿದ್ದು, ತರಬೇತಿ ಮುಂದುವರೆಸಲಾಗಿದೆ. ಪಾವಗಡದಲ್ಲಿ ಪತ್ತೆಯಾಗಿರುವ ಪತ್ರದಲ್ಲಿ ನೈಜತೆ ಇದ್ದರೆ, ನಕ್ಸಲ್ ನಿಗ್ರಹ ಚಟುವಟಿಕೆಗಳನ್ನು ಹತ್ತಿಕ್ಕಲು ಕಾರ್ಕಳದ ಪಡೆಯನ್ನು ಪಾವಗಡದ ಕಡೆಗೆ ಸ್ಥಳಾಂತರಿಸಲಾಗುವುದು ಎಂದು ತಿಳಿಸಿದರು. ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ಗಂಗಾಸಾಗರ ಗ್ರಾಮದಲ್ಲಿನ ಕುಂಡ್ಲಭೂಷಪ್ಪ ಅವರ ಜಮೀನಿನಲ್ಲಿ ಕಾಮ್ರೆಡ್ ದೇವನ್ನ ದಳಂ ಹೆಸರಿನಲ್ಲಿ ಪತ್ರವೊಂದು ಪತ್ತೆಯಾಗಿದೆ. ಪೀಪಲ್ ಸವಾರ್ ಜನಶಕ್ತಿ ಪಕ್ಷದ ಹೆಸರನ್ನು ಬಳಸಿಕೊಳ್ಳಲಾಗಿದ್ದು, ಕನಕಲ ಬಂಡೆಯ ಉಪ್ಪಾರ ವೆಂಕಟೇಶ ಎಂಬುವರ ವಿರುದ್ಧ ರಾಜಕೀಯ ಪಿತೂರಿ ಮತ್ತು ದೌರ್ಜನ್ಯಗಳು ನಡೆಯುತ್ತಿವೆ ಎಂದರು.

# ಬ್ರಿಕ್ಸ್ ಶೃಂಗಸಭೆಗೂ ಮುನ್ನ ಮೋದಿಪುಟಿನ್ ಮಹತ್ವದ ದ್ವಿಪಕ್ಷೀಯ ಮಾತುಕತೆ

### ಭಾರತ ಮಂಟಪದಲ್ಲಿ ನಡೆಯಲಿರುವ ಈ ಶೃಂಗಸಭೆಯಲ್ಲಿ 11 ಸದಸ್ಯ ರಾಷ್ಟ್ರಗಳು ಮತ್ತು 10 ಪಾಲುದಾರ ರಾಷ್ಟ್ರಗಳ ನಾಯಕರು ಹಾಗೂ ಕೆಲವು ಅಂತಾರಾಷ್ಟ್ರೀಯ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

• ಉದಯವಾಹಿನಿ, ಬೆಂಗಳೂರು

ಎರಡು ದಿನಗಳ ಬ್ರಿಕ್ಸ್ ಶೃಂಗಸಭೆ ಆರಂಭವಾಗುವುದಕ್ಕೆ ಒಂದು ದಿನ ಮುನ್ನ ಪ್ರಧಾನಿ ನರೇಂದ್ರ ಮೋದಿ ಮತ್ತು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಶುಕ್ರವಾರ ನವದೆಹಲಿಯಲ್ಲಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಮಧ್ಯಾಹ್ನ 3.30ಕ್ಕೆ ಆರಂಭವಾದ ಸಭೆಯಲ್ಲಿ ಭಾರತ,ರಷ್ಯಾ ನಡುವಿನ ವ್ಯಾಪಾರ, ಇಂಧನ, ರಕ್ಷಣೆ, ನಾಗರಿಕ ಪರಮಾಣು ಸಹಕಾರ ಹಾಗೂ ನಿರ್ಣಾಯಕ ಖನಿಜಗಳ ಪೂರೈಕೆ ಸೇರಿದಂತೆ ಹಲವು ಪ್ರಮುಖ ವಿಷಯಗಳು ಚರ್ಚೆಗೆ ಬಂದಿವೆ. ರಷ್ಯಾವು ಭಾರತದ ಪ್ರಮುಖ ಕಚ್ಚಾತೈಲ ಪೂರೈಕೆದಾರ ರಾಷ್ಟ್ರಗಳಲ್ಲಿ ಒಂದಾಗಿದೆ. ಆಗಸ್ಟ್‌ನಲ್ಲಿ ರಷ್ಯಾದಿಂದ ಭಾರತ ಆಮದು ಮಾಡಿಕೊಂಡ ಕಚ್ಚಾತೈಲದ ಪ್ರಮಾಣ ಶೇ.26ರಷ್ಟು ಕುಸಿದಿದ್ದರೂ, ಪ್ರತಿದಿನ ಸುಮಾರು 20 ಲಕ್ಷ ಬ್ಯಾರೆಲ್ ತೈಲವನ್ನು ಖರೀದಿಸಲಾಗಿದೆ.

ಇರಾನ್ ಯುದ್ಧ ಹಾಗೂ ಹೋರ್ಮುಜ್ ಜಲಸಂಧಿಯ ಮೂಲಕ ಸಾಗುವ ತೈಲ ಪೂರೈಕೆಯಲ್ಲಿ ಉಂಟಾಗಿರುವ ಅಡಚಣೆಗಳ ಹಿನ್ನೆಲೆಯಲ್ಲಿ ಭಾರತ,ರಷ್ಯಾ ಇಂಧನ ಸಂಬಂಧ ಮತ್ತಷ್ಟು ಮಹತ್ವ ಪಡೆದುಕೊಂಡಿದೆ. ರಷ್ಯಾದಿಂದ ತೈಲ ಖರೀದಿಯನ್ನು ಕಡಿಮೆ ಮಾಡುವಂತೆ ಅಮೆರಿಕ ಸೇರಿದಂತೆ ಪಾಶ್ಚಿಮಾತ್ಯ ರಾಷ್ಟ್ರಗಳು ಭಾರತಕ್ಕೆ ಒತ್ತಡ ಹೇರುತ್ತಿವೆ.

ಭಾರತ ಮತ್ತು ರಷ್ಯಾ ನಡುವಿನ ದ್ವಿಪಕ್ಷೀಯ ವ್ಯಾಪಾರವನ್ನು 2030ರ ವೇಳೆಗೆ 100 ಬಿಲಿಯನ್ ಡಾಲರ್‌ಗೆ ಹೆಚ್ಚಿಸುವ ಗುರಿಯ ಬಗ್ಗೆಯೂ ಉಭಯ ನಾಯಕರು ಚರ್ಚಿಸಿದ್ದಾರೆ ಎನ್ನಲಾಗಿದೆ.




2024,25ನೇ ಹಣಕಾಸು ವರ್ಷದಲ್ಲಿ ಎರಡೂ ದೇಶಗಳ ನಡುವಿನ ವ್ಯಾಪಾರವು ಸುಮಾರು 70 ಬಿಲಿಯನ್ ಡಾಲರ್ ತಲುಪಿತ್ತು. ರಕ್ಷಣಾ ಸಹಕಾರ ಮಾತುಕತೆಯ ಮತ್ತೊಂದು ಪ್ರಮುಖ ವಿಷಯವಾಗಿದೆ. ಅಮೆರಿಕದ ಈ–22 ರ್ಯಾಪ್ಟರ್ ಮತ್ತು ಈ–35 ಲೈಟ್ನಿಂಗ್ ಯುದ್ಧವಿಮಾನಗಳಿಗೆ ಪೈಪೋಟಿ ನೀಡುವ ರಷ್ಯಾದ ಐದನೇ ತಲೆಮಾರಿನ ಸುಖೋಯ್ Su–57 ಯುದ್ಧವಿಮಾನವನ್ನು ಭಾರತಕ್ಕೆ ಮಾರಾಟ ಮಾಡುವ ಪ್ರಸ್ತಾಪದ ಕುರಿತು ಚರ್ಚೆ ನಡೆದಿರುವ ಸಾಧ್ಯತೆಯಿದೆ.

ಯುದ್ಧವಿಮಾನವು ಅತ್ಯಾಧುನಿಕ ಸ್ಟೆಲ್ತ್ ತಂತ್ರಜ್ಞಾನ, ಸುಧಾರಿತ ಸಂವೇದಕಗಳು ಹಾಗೂ ಎಲೆಕ್ಟ್ರಾನಿಕ್ ಯುದ್ಧ ವ್ಯವಸ್ಥೆಗಳನ್ನು ಹೊಂದಿದೆ. ನಾಗರಿಕ ಪರಮಾಣು ಕ್ಷೇತ್ರದಲ್ಲಿ ಇಂಧನ ಪೂರೈಕೆ, ಪರಮಾಣು ಸ್ಥಾವರಗಳ ನಿರ್ವಹಣೆ ಮತ್ತು ಸಂಪೂರ್ಣ ಕಾರ್ಯಾಚರಣಾ ಅವಧಿಗೆ ತಾಂತ್ರಿಕ ನೆರವು ನೀಡುವ ಕುರಿತು ಉಭಯ ನಾಯಕರು ಮಾತುಕತೆ ನಡೆಸಿದ್ದಾರೆ. ನಿರ್ಣಾಯಕ ಖನಿಜಗಳ ಅನ್ವೇಷಣೆ ಮತ್ತು ಪೂರೈಕೆ ಕ್ಷೇತ್ರದಲ್ಲಿ ಸಹಕಾರ ವಿಸ್ತರಿಸುವ ಬಗ್ಗೆಯೂ ಚರ್ಚಿಸಲಾಗಿದೆ. ಕಳೆದ ಮೂರು ವಾರಗಳಲ್ಲಿ ಪ್ರಧಾನಿ ಮೋದಿ ಮತ್ತು ಅಧ್ಯಕ್ಷ ಪುಟಿನ್ ಭೇಟಿಯಾಗುತ್ತಿರುವುದು ಇದು ಎರಡನೇ ಬಾರಿ. ಈ ಹಿಂದೆ ಕಿರ್ಗಿಸ್ತಾನದಲ್ಲಿ ನಡೆದ ಶಾಂಘೈ ಸಹಕಾರ ಸಂಘಟನೆಯ ಶೃಂಗಸಭೆಯ ಸಂದರ್ಭದಲ್ಲಿ ಇಬ್ಬರೂ ಮಾತುಕತೆ ನಡೆಸಿದ್ದರು. ಆಗ ಪ್ರಧಾನಿ ಮೋದಿ ಶಾಂತಿ ಮತ್ತು ಮಾತುಕತೆಯ ಮೂಲಕ ಸಂಘರ್ಷಗಳನ್ನು ಪರಿಹರಿಸಬೇಕೆಂಬ ಭಾರತದ ಸಂದೇಶವನ್ನು ಪುನರುಚ್ಚರಿಸಿದ್ದರು.

ಪ್ರಧಾನಿ ನರೇಂದ್ರ ಮೋದಿ ಅವರು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರಿಗೆ ಪ್ರಾಚೀನ ತಮಿಳು ಕೃತಿ ತಿರುವಳ್ಳುವರ್‌ನ ರಷ್ಯನ್ ಭಾಷಾಂತರಿತ ಕೃತಿಯನ್ನು ಉಡುಗೊರೆಯಾಗಿ ನೀಡಿದ್ದಾರೆ. ತಮಿಳುನಾಡಿನ ಶ್ರೀಮಂತ ಸಾಹಿತ್ಯಿಕ ಹಾಗೂ ತಾತ್ವಿಕ ಪರಂಪರೆಯನ್ನು ಪ್ರತಿಬಿಂಬಿಸುವ ಈ ಕೃತಿಯ ಮೂಲಕ ಭಾರತ ,ರಷ್ಯಾ ನಡುವಿನ ದೀರ್ಘಕಾಲದ ಸಾಂಸ್ಕೃತಿಕ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ಸಂದೇಶವನ್ನು ಪ್ರಧಾನಿ ಮೋದಿ ಸಾರಿದ್ದಾರೆ. ಬೇಕಿದ್ದರೆ ಇದನ್ನು ಇನ್ನಷ್ಟು ಪತ್ರಿಕಾ ಶೈಲಿಯಲ್ಲಿ ವಿಸ್ತರಿಸಿ ಅಥವಾ ಚಿಕ್ಕ ಸುದ್ದಿಯಾಗಿ ಮಾಡಬಹುದು.

### ಬ್ರಿಕ್ಸ್ ಶೃಂಗಸಭೆಯಲ್ಲಿ ಸಕಾರಾತ್ಮಕ ಚರ್ಚೆ ನಡೆಯುವ ವಿಶ್ವಾಸವಿದೆ

ಜಾಗತಿಕ ಕಲ್ಯಾಣದ ಆಶಯದೊಂದಿಗೆ ಬ್ರಿಕ್ಸ್ ಶೃಂಗಸಭೆಯಲ್ಲಿ ವಿವಿಧ ವಿಷಯಗಳ ಕುರಿತು ಸಕಾರಾತ್ಮಕ ಮತ್ತು ಅರ್ಥಪೂರ್ಣ ಚರ್ಚೆಗಳು ನಡೆಯಲಿವೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಭಾರತದ ನೇತೃತ್ವದಲ್ಲಿ ಸೆಪ್ಟೆಂಬರ್ 12 ರಿಂದ 13ರ ವರೆಗೆ ಬ್ರಿಕ್ಸ್ ಶೃಂಗಸಭೆಯನ್ನು ಆಯೋಜಿಸುತ್ತಿದೆ. ನವದೆಹಲಿಯ ಭಾರತ ಮಂಟಪದಲ್ಲಿ ನಡೆಯಲಿರುವ ಈ ಶೃಂಗಸಭೆಯಲ್ಲಿ 11 ಸದಸ್ಯ ರಾಷ್ಟ್ರಗಳು ಮತ್ತು 10 ಪಾಲುದಾರ ರಾಷ್ಟ್ರಗಳ ನಾಯಕರು ಹಾಗೂ ಕೆಲವು ಅಂತಾರಾಷ್ಟ್ರೀಯ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ.ಈ ಕುರಿತು ಎಕ್ಸ್ ಜಾಲತಾಣದ ಮೂಲಕ ಪೋಸ್ಟ್ ಹಂಚಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿ, ಬ್ರಿಕ್ಸ್ ಶೃಂಗಸಭೆಗಾಗಿ ಪ್ರಪಂಚದಾದ್ಯಂತದ ನಾಯಕರು ಒಂದೆಡೆ ಸೇರಲಿದ್ದಾರೆ. ಜಾಗತಿಕ ಕಲ್ಯಾಣದ ಆಶಯದೊಂದಿಗೆ ವಿವಿಧ ವಿಷಯಗಳ ಕುರಿತು ಸಕಾರಾತ್ಮಕ ಹಾಗೂ ಅರ್ಥಪೂರ್ಣ ಚರ್ಚೆಗಳು ನಡೆಯಲಿವೆ ಎಂಬ ಸಂಪೂರ್ಣ ವಿಶ್ವಾಸ ನನಗಿದೆ ಎಂದಿದ್ದಾರೆ. ಶೃಂಗಸಭೆಗಾಗಿ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಚೀನಾದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಮತ್ತು ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್, ಉರುಗ್ವೆಯ ವಿದೇಶಾಂಗ ಸಚಿವ ಮಾರಿಯೋ ಲುಬೆಟ್ಕಿನ್ ಸೇರಿದಂತೆ ಹಲವು ನಾಯಕರು ನವದೆಹಲಿಗೆ ಆಗಮಿಸಿದ್ದಾರೆ.

**ಈ ದಿನದ ದರ** ಪೆಟ್ರೋಲ್: 110.93₹/L ಡೀಸೆಲ್ : 98.80₹/L ಬಂಗಾರ: ₹ 15,442/Gram 24ct ₹ 14,155 /Gram 22ct ಬೆಳ್ಳಿ: ₹245.00/

# ಮಂಡ್ಯ ರವಿ ಸ್ಮರಣಾರ್ಥ ರಂಗನಟ ಪ್ರಶಸ್ತಿ ಪ್ರದಾನ ಸಾಹಿತ್ಯ ಪ್ರತಿಭೆಗಳಿಗೆ ಸನ್ಮಾನ 'ಸೂಜಿ' ಕೃತಿ ಲೋಕಾರ್ಪಣೆ

• ಉದಯವಾಹಿನಿ, ಮಂಡ್ಯ

ಕನ್ನಡ ನಾಡು, ನುಡಿ, ಸಾಹಿತ್ಯ, ರಂಗಭೂಮಿ ಹಾಗೂ ಸಾಂಸ್ಕೃತಿಕ ಕ್ಷೇತ್ರದ ಪ್ರತಿಭೆಗಳನ್ನು ಗುರುತಿಸಿ, ಗೌರವಿಸಿ, ಪ್ರೋತ್ಸಾಹಿಸುವ ಉದ್ದೇಶದಿಂದ 'ಜೀವನಾಡಿ ಸಾಹಿತ್ಯ ಸಮ್ಮೇಳನ 2026'ರ ಪ್ರಧಾನ ಸಮಾರಂಭವನ್ನು ಸೆಪ್ಟೆಂಬರ್ 13ರಂದು ಭಾನುವಾರ ಮಂಡ್ಯದಲ್ಲಿ ಆಯೋಜಿಸಲಾಗಿದೆ. ಮಂಡ್ಯ ನಗರದ ಗಾಂಧಿಭವನ, ಕೆ.ಆರ್. ರಸ್ತೆ, ಸ್ಟೇಡಿಯಂ ಪಕ್ಕದಲ್ಲಿ ಬೆಳಿಗ್ಗೆ 10.30 ಗಂಟೆಗೆ ನಡೆಯಲಿರುವ ಈ ಸಾಹಿತ್ಯ ಸಂಭ್ರಮದಲ್ಲಿ ಸಾಹಿತಿಗಳು, ರಂಗಭೂಮಿ ಕಲಾವಿದರು, ಗಮಕಿಗಳು, ಲೇಖಕರು, ಸಾಹಿತ್ಯಾಸಕ್ತರು ಹಾಗೂ ಕನ್ನಡಾಭಿಮಾನಿಗಳು ಭಾಗವಹಿಸಲಿದ್ದಾರೆ.

ಕಿರುತೆರೆ ನಟ ದಿ. ಎಂ. ರವಿಪ್ರಸಾದ್ ಅವರ ಸ್ಮರಣಾರ್ಥ ನೀಡಲಾಗುವ ರಾಜ್ಯಮಟ್ಟದ ಹವ್ಯಾಸಿ ರಂಗನಟ ಪ್ರಶಸ್ತಿ ಪ್ರದಾನ ಕಾರ್ಯಕ್ರಮವು ಸಮ್ಮೇಳನದ ಪ್ರಮುಖ ಆಕರ್ಷಣೆಯಾಗಿದೆ. ಕನ್ನಡ ರಂಗಭೂಮಿ ,


ಉದಯವಾಹಿನಿ ಚಿತ್ರ

ಪ್ರಖ್ಯಾತ ಚಲನಚಿತ್ರ ನಟರಾದ ಶ್ರೀ ಮಂಡ್ಯ ರಮೇಶ್, ಮೈಸೂರು ಅವರು ಈ ಪ್ರಶಸ್ತಿಗೆ ಪುರಸ್ಕೃತರಾಗಲಿದ್ದಾರೆ. ರಂಗಭೂಮಿ ಹಾಗೂ ಚಲನಚಿತ್ರ ಕ್ಷೇತ್ರಕ್ಕೆ ಅವರು ನೀಡಿರುವ ಕೊಡುಗೆಯನ್ನು ಗೌರವಿಸುವ ಸಮಾರಂಭವು ವಿಶೇಷ ಘಟ್ಟವಾಗಲಿದೆ. ಇದರೊಂದಿಗೆ ರಾಜ್ಯಮಟ್ಟದ 'ಜೀವನಾಡಿ ಸಾಹಿತ್ಯ ಸ್ಪರ್ಧೆ2026'ರ ಪ್ರಶಸ್ತಿ ವಿತರಣೆ ನಡೆಯಲಿದ್ದು, ವಿವಿಧ ವಿಭಾಗಗಳಲ್ಲಿ ಸಾಧನೆ ಮಾಡಿದ ಸಾಹಿತ್ಯ ಪ್ರತಿಭೆಗಳನ್ನು ಗೌರವಿಸಲಾಗುವುದು. ವಿಶ್ವಾಸ್ ಡಿ. ಗೌಡರಿಂದ 'ಸೂಜಿ' ಕೃತಿ ಲೋಕಾರ್ಪಣೆ ಸಮ್ಮೇಳನದ ಮತ್ತೊಂದು ಪ್ರಮುಖ ಆಕರ್ಷಣೆಯಾಗಿ 'ಜೀವನಾಡಿ' ಉಪಸಂಪಾದಕರಾದ, ಸಾಹಿತಿಗಳಾದ, ಶ್ರೀ ವಿಶ್ವಾಸ್ ಡಿ. ಗೌಡ ಅವರು 'ಸೂಜಿ' ಕೃತಿಯನ್ನು ಲೋಕಾರ್ಪಣೆ ಮಾಡಲಿದ್ದಾರೆ.

ಈ ಕೃತಿಯನ್ನು ಶ್ರೀಮತಿ ಕೀರ್ತಿ ಕಿರಣ್ ಕುಮಾರ್, ಜಂಭರಡಿ, ಸಕಲೇಶಪುರ ತಾಲ್ಲೂಕು ಅವರು ರಚಿಸಿದ್ದಾರೆ. ಹೊಸ ಕೃತಿಯೊಂದನ್ನು ಸಾಹಿತ್ಯಾಸಕ್ತರ ಮುಂದೆ ಪರಿಚಯಿಸುವ ಕಾರ್ಯಕ್ರಮವು ಸಮ್ಮೇಳನದ ಸಾಹಿತ್ಯಿಕ ಮಹತ್ವವನ್ನು ಮತ್ತಷ್ಟು ಹೆಚ್ಚಿಸಲಿದೆ. ಸಮ್ಮೇಳನದಲ್ಲಿ 'ಜೀವನಾಡಿ ವಿಶೇಷ ಸಂಚಿಕೆ2026' ಕೂಡ ಬಿಡುಗಡೆಯಾಗಲಿದ್ದು, ಗಮಕಿಗಳು ಅಭಿವೃದ್ಧಿ ಕ್ಷೇತ್ರದ ಅಧಿಕಾರಿಗಳಾದ ಎಲ್ಐಸಿ (ನಿ.) ಡಾ. ಎಸ್. ಶ್ರೀನಿವಾಸ ಶೆಟ್ಟಿ ಅವರು ಸಂಚಿಕೆಯನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಇದರೊಂದಿಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಸಮಾರಂಭದಲ್ಲಿ ಡಾ. ಈ.ಸಿ. ನಿಂಗರಾಜ್ ಗೌಡ, ಮಾಜಿ ಸೆನೆಟ್ ಸದಸ್ಯರು, ಮೈಸೂರು ವಿಶ್ವವಿದ್ಯಾಲಯ ಹಾಗೂ ಸಮಾಜಸೇವಕರು, ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಖ್ಯಾತ ಸಾಹಿತಿಗಳು, ಗಮಕಿಗಳು, ಕಲಾವಿದರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ.ಸಾಹಿತ್ಯ ಮತ್ತು ರಂಗಭೂಮಿ ಕ್ಷೇತ್ರದ ಸಾಧಕರನ್ನು ಒಂದೇ ವೇದಿಕೆಯಲ್ಲಿ ಗೌರವಿಸುವ ಈ ಸಮ್ಮೇಳನವು ಕನ್ನಡಾಭಿಮಾನಿಗಳ ಪಾಲಿಗೆ ಅರ್ಥಪೂರ್ಣ ಕಾರ್ಯಕ್ರಮವಾಗಲಿದೆ. ಹೊಸ ಬರಹಗಾರರಿಗೆ ಪ್ರೋತ್ಸಾಹ, ಸಾಹಿತ್ಯ ಕೃತಿಗಳಿಗೆ ವೇದಿಕೆ ಹಾಗೂ ಕಲಾವಿದರಿಗೆ ಗೌರವ ನೀಡುವ ಮೂಲಕ ಜೀವನಾಡಿ ಬಳಗವು ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರಕ್ಕೆ ತನ್ನದೇ ಆದ ಕೊಡುಗೆಯನ್ನು ನೀಡುತ್ತಿದೆ.

ಕನ್ನಡ ಸಾಹಿತ್ಯದ ಸೊಗಡನ್ನು ಸವಿಯಲು, ಸಾಧಕರನ್ನು ಗೌರವಿಸಲು, 'ಸೂಜಿ' ಕೃತಿ ಲೋಕಾರ್ಪಣೆಗೆ ಸಾಕ್ಷಿಯಾಗಲು ಹಾಗೂ 'ಜೀವನಾಡಿ ಸಾಹಿತ್ಯ ಸಮ್ಮೇಳನ 2026ರ ಸಂಭ್ರಮದಲ್ಲಿ ಭಾಗಿಯಾಗಲು ಸಾಹಿತ್ಯಾಸಕ್ತರು ಮತ್ತು ಕನ್ನಡಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ಜೀವನಾಡಿ ಬಳಗ ಆತ್ಮೀಯವಾಗಿ ಆಹ್ವಾನಿಸಿದೆ.

# ಮೊರಾರ್ಜಿ ಶಾಲೆಯ ಮಕ್ಕಳು ಅಸ್ವಸ್ಥ: ಶಾಸಕ ಮಂಜು ಭೇಟಿ ಪರಿಶೀಲನೆ

## 230 ಮಕ್ಕಳು ವ್ಯಾಸಂಗ ಮಾಡುತ್ತಿದ್ದು ಬೆಳಿಗ್ಗೆ ತಿಂಡಿ ಸೇವನೆಗೂ ಮುನ್ನವೇ 18 ಮಕ್ಕಳಿಗೆ ವಾಂತಿ ಭೇದಿ ಕಾಣಿಸಿಕೊಂಡಿತು

• ಉದಯವಾಹಿನಿ, ಕೆ.ಆರ್.ಪೇಟೆ

1 18 ಮಕ್ಕಳಿಗೆ ವಾಂತಿ ಭೇದಿ

2 25 ಮಕ್ಕಳಿಗೆ ವಾಂತಿ ಬೇಧಿ

3 ತಕ್ಷಣವೇ ಚಿಕಿತ್ಸೆ ನೀಡಿದೆ

ಕಲುಷಿತ ನೀರು ಸೇವನೆಯಿಂದ ತಾಲ್ಲೂಕಿನ ಸಾರಂಗಿ ಗ್ರಾಮದಲ್ಲಿರುವ ಮೊರಾರ್ಜಿ ವಸತಿ ಶಾಲೆಯ 43 ಮಕ್ಕಳು ಅಸ್ವಸ್ಥಗೊಂಡಿದ್ದು ತಾಲೂಕು ವೈದ್ಯರ ತಂಡ ಚಿಕಿತ್ಸೆ ನೀಡುತ್ತಿದೆ. ಚಿಕಿತ್ಸೆಗೆ ಸಂಪೂರ್ಣವಾಗಿ ಸ್ಪಂಧಿಸಿರುವ ಮಕ್ಕಳು ಹಂತಹಂತವಾಗಿ ಗುಣಮುಖರಾಗುತ್ತಿದ್ದಾರೆ.

ಸಾರಂಗಿ ಗ್ರಾಮದ ಮೊರಾರ್ಜಿ ವಸತಿ ಶಾಲೆಯಲ್ಲಿ ಒಟ್ಟು 230 ಮಕ್ಕಳು ವ್ಯಾಸಂಗ ಮಾಡುತ್ತಿದ್ದು ಬೆಳಿಗ್ಗೆ ತಿಂಡಿ ಸೇವನೆಗೂ ಮುನ್ನವೇ 18 ಮಕ್ಕಳಿಗೆ ವಾಂತಿ ಭೇದಿ ಕಾಣಿಸಿಕೊಂಡಿತು. ಇದರಲ್ಲಿ ತೀವ್ರವಾಗಿ ಅಸ್ವಸ್ಥಗೊಂಡ ನಾಲ್ಕು ವಿದ್ಯಾರ್ಥಿಗಳನ್ನು ತಕ್ಷಣವೇ ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಸೂಕ್ತ ಚಿಕಿತ್ಸೆ ನೀಡಲಾಯಿತು. ಸುದ್ದಿ ತಿಳಿಯುತ್ತಿದ್ದಂತೆಯೇ ಶಾಸಕ ಹೆಚ್.ಟಿ.ಮಂಜು ಹಾಗೂ ತಾಲ್ಲೂಕು ವೈದ್ಯಾಧಿಕಾರಿಗಳ ತಂಡ ವಸತಿ ಶಾಲೆಗೆ ಆಗಮಿಸಿ ಅಸ್ವಸ್ಥ ಮಕ್ಕಳಿಗೆ ಚಿಕಿತ್ಸೆ ನೀಡಿದರು. ಮತ್ತೆ 25 ಮಕ್ಕಳಿಗೆ ವಾಂತಿ ಬೇಧಿ ಕಾಣಿಸಿಕೊಂಡಿದ್ದು ಸ್ಥಳದಲ್ಲಿಯೇ ಇದ್ದ ವೈದ್ಯರ ತಂಡ ತಕ್ಷಣವೇ ಸೂಕ್ತ ಚಿಕಿತ್ಸೆ ನೀಡಿದೆ. ಶಾಸಕ ಹೆಚ್.ಟಿ.ಮಂಜು ಸ್ಥಳದಲ್ಲಿದ್ದು ಮಕ್ಕಳ ಚಿಕಿತ್ಸೆಗೆ ಅಗತ್ಯ ಗಮನ ಹರಿಸಿದ್ದಾರಲ್ಲದೆ ಘಟನೆಗೆ ಕಾರಣವಾದ ಅಂಶವನ್ನು ಪತ್ತೆ ಮಾಡುವಂತೆ ಸೂಚಿಸಿದ್ದಾರೆ.

ಉಪಹಾರ ಸೇವನೆಗೆ ಮುನ್ನವೇ ಮಕ್ಕಳಿಗೆ ವಾಂತಿ ಬೇಧಿ ಕಾಣಿಸಿಕೊಂಡಿರುವುದರಿಂದ ಕಲುಷಿತ ನೀರು ಸೇವನೆ ಘಟನೆಗೆ ಕಾರಣವಾಗಿರಬಹುದೆಂದು ಶಂಕಿಸಲಾಗಿದೆ. ಸಾರಂಗಿ ಮೊರಾರ್ಜಿ ವಸತಿ ಶಾಲೆಗೆ ನೀರು ಪೂರೈಕೆ ಮಾಡುವ ಕೊಳವೆ ಬಾವಿಗಳು ಕಳೆದ ಎರಡು ವರ್ಷಗಳ ಹಿಂದೆಯೇ ಕೆಟ್ಟು ಹೋಗಿದ್ದು ಅಧಿಕಾರಿಗಳು ಇದನ್ನು ಸರಿಪಡಿಸುವ ಗೋಜಿಗೆ ಹೋಗಿಲ್ಲ.

ಆದರೆ ತೀವ್ರ, ಬರಗಾಲದ ಪರಿಣಾಮ ಬಿಸಿಎಂ ಹಾಸ್ಟಲ್‌ನ ಕೊಳವೆ ಬಾವಿಯಲ್ಲಿ ನೀರಿನ


ಉದಯವಾಹಿನಿ ಚಿತ್ರ

ಪ್ರಮಾಣ ಕುಸಿದಿದೆ. ಜೊತೆಗೆ ಕಳೆದ ಎರಡು ಮೂರು ದಿನಗಳಿಂದ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಿದ್ದು ಮೊರಾರ್ಜಿ ವಸತಿ ಶಾಲೆಯ ಮಕ್ಕಳಿಗೆ ಹೊರಗಿನಿಂದ ಟ್ಯಾಂಕರ್ ಮೂಲಕ ನೀರು ತರಿಸಲಾಗುತ್ತಿತ್ತು. ಹಾಸ್ಟೆಲ್ ವಿದ್ಯಾರ್ಥಿಗಳಿಗೆ ನಿತ್ಯ 10 ಟ್ಯಾಂಕರ್ ನೀರಿನ ಅಗತ್ಯವಿದ್ದು ವಸತಿ ಶಾಲೆಯ ನೀರು ಪೂರೈಕೆಗಾಗಿಯೇ ಮಾಸಿಕ 3-4 ಲಕ್ಷ ರೂ ಹಣ ವ್ಯಯಿಸಲಾಗುತ್ತಿದೆ. ಟ್ಯಾಂಕರ್ ನೀರನ್ನು ಶುದ್ದೀಕರಿಸಿ ಮಕ್ಕಳಿಗೆ ಪೂರೈಕೆ ಮಾಡಲಾಗುತ್ತಿತ್ತು. ಹಾಸ್ಟಲ್‌ನ ಕೆಲವು ಮಕ್ಕಳು ಶುದ್ದೀಕರಿಸುವ ಮುನ್ನವೇ ಟ್ಯಾಂಕರ್ ನೀರು ಸೇವನೆ ಮಾಡಿರುವುದರಿಂದ ಅವರ ಆರೋಗ್ಯದಲ್ಲಿ ವ್ಯತ್ಯಯವಾಗಿರಬಹುದೆಂದು ಶಂಕಿಸಲಾಗಿದೆ.ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿ ಸುಷ್ಮಾ, ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ವೆಂಕಟೇಶ್, ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಅಜಿತ್, ಡಾ.ಸನ್ಮತಿ ಶ್ಯಾಂ, ಶಾಲೆಯ ವಾರ್ಡನ್ ಪ್ರದೀಪ್, ಪ್ರಾಂಶುಪಾಲೆ ಲಲಿತಾ ಸೇರಿದಂತೆ ಶಿಕ್ಷಕರ ವೃಂದ ಮಕ್ಕಳ ಆರೋಗ್ಯ ಸ್ಥಿತಿಯ ಮೇಲೆ ಗಮನ ಹರಿಸಿದ್ದು ಮಕ್ಕಳು ಹಂತಹಂತವಾಗಿ ಚೇತರಿಸಿಕೊಳ್ಳುತ್ತಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ನೈಜ ಕಾರಣವನ್ನು ತನಿಕಾಧಿಕಾರಿಗಳು ಪತ್ತೆ ಹಚ್ಚಬೇಕಾಗಿದೆ.

**ಚಿಕಿತ್ಸೆ ಪಡೆಯುತ್ತಿರುವ ಮಕ್ಕಳನ್ನು ಮಾತನಾಡಿಸಿ ಮಾಹಿತಿ ಪಡೆದ ಶಾಸಕರು ಮಕ್ಕಳಿಗೆ ನೀಡುತ್ತಿರುವ ಚಿಕಿತ್ಸಾ ಮಾಹಿತಿ ಪಡೆದು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸುವಂತೆ ಸ್ಥಳದಲ್ಲಿದ್ದು ಆರೋಗ್ಯ ಇಲಾಖೆಯ ಸಿಬ್ಬಂಧಿಗಳಿಗೆ ಸೂಚಿಸಿದರು. -ಶಾಸಕ ಹೆಚ್.ಟಿ.ಮಂಜು**

### ಮಕ್ಕಳ ಚಿಕಿತ್ಸೆಯ ಬಗ್ಗೆ ಗಮನ

ತಾಲ್ಲೂಕು ವೈದ್ಯಾಧಿಕಾರಿ ಡಾ.ಅಜಿತ್ ನೇತೃತ್ವದ ವೈದ್ಯರ ತಂಡ ಸ್ಥಳದಲ್ಲಿಯೇ ಬೀಡುಬಿಟ್ಟಿದ್ದು ಮಕ್ಕಳ ಆರೋಗ್ಯದ ಮೇಲೆ ತೀವ್ರ ನಿಗಾವಹಿಸಿದೆ. ತಹಸೀಲ್ದಾರ್ ಜಿ.ಎಸ್.ಶ್ರೇಯಸ್ ಕೂಡ ಸ್ಥಳದಲ್ಲಿಯೇ ಇದ್ದು ಮಕ್ಕಳ ಚಿಕಿತ್ಸೆಯ ಬಗ್ಗೆ ಗಮನ ಹರಿಸಿದ್ದಾರೆ.

### ವಸತಿ ಶಾಲೆಗೆ ಅಗತ್ಯ ನೀರು

ಇದರಿಂದಾಗಿ ಸದರಿ ವಸತಿ ಶಾಲೆಯಲ್ಲಿ ಕುಡಿಯುವ ನೀರು ಸೇರಿದಂತೆ ಮಕ್ಕಳ ಅಗತ್ಯತೆಗೆ ಬೇಕಾದ ನೀರಿನ ಅಭಾವವಿದೆ. ಮೊರಾರ್ಜಿ ವಸತಿ ಶಾಲೆಯ ಪಕ್ಕದಲ್ಲಿರುವ ಬಿ.ಸಿ.ಎಂ ಹಾಸ್ಟಲ್‌ನ ಬೋರ್ವೆಲ್ ನಿಂದ ಮೊರಾರ್ಜಿ ವಸತಿ ಶಾಲೆಗೆ ಅಗತ್ಯ ನೀರು ತರಲಾಗುತ್ತಿತ್ತು.

# ಮತದಾರರ ಪಟ್ಟಿ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅತ್ಯಂತ ಪ್ರಮುಖ ದಾಖಲೆ

• ಉದಯವಾಹಿನಿ, ಹಾರೋಹಳ್ಳಿ

ಮತದಾರರ ಪಟ್ಟಿ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅತ್ಯಂತ ಪ್ರಮುಖ ದಾಖಲೆಗಳಲ್ಲಿ ಒಂದಾಗಿದೆ ಎಂದು ಹಾರೋಹಳ್ಳಿ ತಾಲ್ಲೂಕುಪಂಚಾಯತಿ ಮುಖ್ಯ ಕಾರ್ಯನಿರ್ವಾಕ ಅಧಿಕಾರಿ ಅಪೂರ್ವ ತಿಳಿಸಿದ್ದಾರೆ.

ತಾಲ್ಲೂಕಿನ ಕಗ್ಗಲಹಳ್ಳಿ ಮತ್ತು ದ್ಯಾವಸಂದ್ರ ಗ್ರಾಮ ಪಂಚಾಯತಿವ್ಯಾಪ್ತಿಯ ಮತದಾರರ ಪಟ್ಟಿ ಶುದ್ಧೀಕರಿಸಿ ಅರ್ಹ ಮತದಾರರ ಹೆಸರನ್ನು ಪಟ್ಟಿಯಲ್ಲಿ ಸೇರ್ಪಡೆಗೊಳಿಸುವ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮತದಾರರನ್ನು ಉದ್ದೇಶಿಸಿ ಮಾತನಾಡಿದರು.

ಚುನಾವಣೆಯ ಸಂದರ್ಭದಲ್ಲಿ ಅರ್ಹ ಮತದಾರರು ತಮ್ಮ ಮತದಾನದ ಹಕ್ಕನ್ನು ಯಾವುದ ತೊಂದರೆಯಿಲ್ಲದೆ,ಚಲಾಯಿಸಲು ಮತದಾರರ ಪಟ್ಟಿ ನಿಖರವಾಗಿರುವುದು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯವನ್ನು ನಿಯಮಾನುಸಾರ ನಡೆಸಲಾಗುತ್ತಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಪ್ರತಿಯೊಬ್ಬರೂ ತಮ್ಮ ಹೆಸರು, ವಿಳಾಸ ವಯಸ್ಸು ಸೇರಿದಂತೆಇತರ ವಿವರಗಳು ಸರಿಯಾಗಿವೆಯೇ ಎಂಬುದನ್ನು ಪರಿಶೀಲಿಸಿಕೊಳ್ಳಬೇಕು ಯಾವುದೇ ತಪ್ಪು ಕಂಡು ಬಮದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಅಗತ್ಯ ತಿದ್ದುಪಡಿ ಮಾಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು. ಹೊಸದಾಗಿ 18 ವರ್ಷ ಪೂರ್ಣಗೊಳಿಸಿರುವ ಯುವ ಮತದಾರರು ಮತದಾರರ ಪಟ್ಟಿಗೆ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು ಅವಕಾಶವಿದೆ ಅರ್ಹ ಯುವಜನರು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಂಡು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

# ಪೊಲೀಸರಿಂದ ಆರೋಪಿಯ ವಿರುದ್ಧ ಪ್ರಕರಣ ದಾಖಲು

• ಉದಯವಾಹಿನಿ, ನಂಜನಗೂಡು

ಮಹದೇವಮ್ಮ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹೊಸ ಕಡೆಜಟ್ಟಿ ಗ್ರಾಮದಲ್ಲಿ ಮೃತ ಮಹದೇವಮ್ಮನ ಶವವಿಟ್ಟು 2ನೇ ದಿನದ ಪ್ರತಿಭಟನೆಯನ್ನು ಮುಂದುವರಿಸಲಾಯಿತು. ಪ್ರತಿಭಟನಾಕಾರರ ಒತ್ತಡಕ್ಕೆ ಮಣಿದು ಹುಲ್ಲಹಳ್ಳಿ ಠಾಣೆಯ ಪೊಲೀಸರಿಂದ ಆರೋಪಿಯ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಯಿತು.ತಹಶೀಲ್ದಾರ್ ಸ್ಮಿತಾರಾಮು ಮತ್ತು ಧರ್ಮೇಂದ್ರರವರ ಭರವಸೆಯ ಮೇರೆಗೆ ಮೃತ ಮಹದೇವಮ್ಮನ ಅಂತ್ಯ ಸಂಸ್ಕಾರ ನಡೆಸಲಾಯಿತು.

ಬಾನುವಾರಂದು ಹಣ ಕಾಸಿನ ವಿಚಾರಕ್ಕೆ ಸಂಬಂದಿಸಿದಂತೆ ಗ್ರಾಮದ ಮಹಾದೇವಮ್ಮ ಮತ್ತು ಅದೆ ಗ್ರಾಮದ ಆರೋಪಿ ನವಿನ ಜೋತೆ ಮಾತಿನ ಜೊತೆ ಮಾತಿನ ಚಕಮಕಿ ನಡೆದು. ಅರೋಪಿ ನವಿನ್ ಮೃತ ಮಹಾದೇವಮ್ಮ ನಿಗೆ ಗಂಭೀರವಾಗಿ ಹಲ್ಲೆ ನಡೆಸಿದ್ದಾನೆ. ಹಲ್ಲೆಗೊಳಗಾದ ಮಹಾದೇವಮ್ಮನ್ನು ಪ್ರಥಮ ಚಿಕಿತ್ಸೆಗಾಗಿ ನಂಜನಗೂಡಿನ ತಾಲ್ಲೂಕು ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು.

ನ್ಯಾಯಕ್ಕಾಗಿ ಹುಲ್ಲಹಳ್ಳಿ ಪೊಲೀಸ್ ಠಾಣೆ ಮುಂದೆ ಪೊಲೀಸರ ವಿರುದ್ಧ ಘೋಷಣೆ ಕೂಗಿ ಪ್ರತಿಭಟನೆ ನಡೆಸಿದ್ದರು, ಉದ್ರಿಕ್ತರನ್ನು ಪೊಲೀಸರು ಸಂತೈಸಿ ಕಳುಹಿಸಿದ್ದರು ಸಹ ಕೂಡ ಮೃತ ಮಹದೇವಮ್ಮಳ ಶವಸಂಸ್ಕಾರ ಕಾರ್ಯ ನಡೆಸದೆ ಶವದೊಂದಿಗೆ ಪ್ರತಿಭಟನೆ ಮುಂದುವರಿಸಿದ್ದರು, ಸೆ.10ರ ಸಹ ಮಾಜಿ ಸಚಿವ ಕೋಟೆ ಎಂ.ಶಿವಣ್ಣ, ಸಮುದಾಯದ ಹಿರಿಯ ಮುಖಂಡರಾದ ವಕೀಲ ಅರುಣ್ ಕುಮಾರ್, ಜಗಜೀವನರಾಮ್ ಸಂಘಟನೆಯ ಅಧ್ಯಕ್ಷ ಸಮಾಜ ಸೇವಕ ಚಂದ್ರು ನೇತೃತ್ವದಲ್ಲಿ ಕೊಲೆಯಾಗಿ ನಾಲ್ಕು ದಿನ ಕಳೆದರೂ ಶವಸಂಸ್ಕಾರ ಕಾರ್ಯವನ್ನು ನಡೆಸದೆ ಆರೋಪಿಯನ್ನು


ಉದಯವಾಹಿನಿ ಚಿತ್ರ

**ಗಂಭೀರವಾದ ಗಾಯಗಳಾದ ಹಿನ್ನೆಲೆಯಲ್ಲಿ ಮಹಾದೇವಮ್ಮ ನನ್ನು ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಕೆ ಆರ್ ಆಸ್ಪತ್ರೆಗೆ ರವಾನಿಸಲಾಯಿತು. ಚಿಕಿತ್ಸೆ ಫಲಕಾರಿಯಾಗದೆ ಮಹಾದೇವಮ್ಮ ಕೊನೆ ಉಸಿರೆಳೆದಿದ್ದಾರೆ. ಈ ಸಂಬಂಧ ನಂಜನಗೂಡಿನ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲು ಮುಂದಾದರು.**

ಕೂಡಲೇ ಬಂಧಿಸುವಂತೆ ಆಗ್ರಹಿಸಿ ಗ್ರಾಮದಲ್ಲಿ ಬೃಹತ್ ಪ್ರತಿಭಟನೆ ಮುಂದುವರಿಸಿದ್ದರು. ಪ್ರತಿಭಟನಾಕಾರರ ಒತ್ತಡಕ್ಕೆ ಮಣಿದ ಹುಲ್ಲಹಲಕ್ಷದ ಪೊಲೀಸ್ ಠಾಣೆಯ ಪೊಲೀಸರು ಎಫ್ಐಆರ್ ದಾಖಲಿಸಿ ಕೊಂಡು ಶೀಘ್ರವಾಗಿ ಆರೋಪಿಯನ್ನು ಬಂಧಿಸುವ ಭರವಸೆ ನೀಡಿದ್ದಾರೆ. ಜನಾಂಗದವರಿಗೆ ಆಗಿರುವ ಅನ್ಯಾಯದ ಪರ ಚಂದ್ರು, ನೇತೃತ್ವದಲ್ಲಿ ಮತ್ತು ಇದರ ಮುಖಂಡರ ಒಳಗೊಂಡಂತೆ ನಾಲ್ಕು ದಿನ ಪ್ರತಿಭಟನೆ ಮಾಡಿ ಗ್ರಾಮದಲ್ಲಿ ಪಾದಯಾತ್ರೆ ಮಾಡಿ ಸುಮಾರು ಐದು ಗಂಟೆಗಳ ಕಾಲ ಅಧಿಕಾರಿಗಳು ಪೊಲೀಸ್ ಇಲಾಖೆಗಳ ಜೊತೆ ಚರ್ಚೆ ಮಾಡಿ ನ್ಯಾಯ ಸಿಗುವವರೆಗೂ ಧಿಕ್ಕಾರ ಕೂಗುತ್ತಾ ಪ್ರತಿಭಟನೆ ಮಾಡಿದರು ಸಂಜೆ ಅಂತಿಮವಾಗಿ ಇವರ ಮಾತಿಗೆ ಸ್ಪಂದಿಸಿದ ಅಧಿಕಾರಿಗಳು ಮೃತಪಟ್ಟ ಮಹಿಳೆಯರಿಗೆ ಇಲಾಖೆಯಿಂದ ಅವರ ಕುಟುಂಬಕ್ಕೆ ಎಲ್ಲಾ ಸೌಕರ್ಯ ಅಂತಂತವಾಗಿ ಒದಗಿಸಲಾಗುತ್ತದೆ ಆತನ ವಿರುದ್ಧ ಎಫ್ ಐಆರ್ ದಾಖಲು ಮಾಡಿದ್ದೇವೆ ಆದ್ದರಿಂದ ತಕ್ಷಣ ಪ್ರತಿಭಟನೆ ಕೈ ಬಿಟ್ಟು ಶವ ಸಂಸ್ಕಾರ ಮಾಡಲು ಸೂಚಿಸಿದರು ಇದಕ್ಕೆ ಒಪ್ಪಿದ್ದೆ ಮುಖಂಡರು ಸಂಜೆ ಶವಸಮಸ್ಕಾರ ನಡೆಯಿತು. ಸಮಾಜ ಸೇವಕ ಜನಾಂಗದ ಯುವ ಮುಖಂಡ ಚಂದ್ರು ಮಾತನಾಡಿ ಒಬ್ಬ ನಮ್ಮ ಜನಾಂಗದ ಬಡ ಮಹಿಳೆಗೆ ಈ ರೀತಿ ಆಗಿರುವುದು ಖಂಡಿಸುತ್ತೇವೆ ಮುಂದೆ ಈ ರೀತಿ ಆಗದಂತೆ ಸೂಕ್ತ ಬಂದು ಬಸ್ ವ್ಯವಸ್ಥೆ ಮಾಡಬೇಕು ಇಂಥ ಸಂದರ್ಭ ಬಂದಾಗ ಪೊಲೀಸ್ ಇಲಾಖೆ ತಕ್ಷಣ ಕ್ರಮ ಕೈಗೊಳ್ಳೇಬೇಕು.

## ವಿಬಿ-ಜಿ ರಾಮ್‌ಜಿ ಕಾಮಗಾರಿ ಯೋಜನೆ ಸದುಪಯೋಗಕ್ಕೆ ಮನವಿ

• ಉದಯವಾಹಿನಿ, ಚಾಮರಾಜನಗರ

ಗ್ರಾಮಗಳ ಸರ್ವಾಂಗಿಣ ಅಭಿವೃದ್ಧಿಗೆ ಮುಕ್ತ ಅವಕಾಶ ಕಲ್ಪಿಸುವ ವಿಕಸಿತ ಭಾರತ-ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) (ವಿಬಿ-ಜಿ ರಾಮ್ ಜಿ) ಯೋಜನೆಯನ್ನು ಪ್ರತಿಯೊಬ್ಬರೂ ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ತಿಳಿಸಿದರು. ಚಾಮರಾಜನಗರ ತಾಲ್ಲೂಕಿನ ಕೂಡ್ಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೊಡ್ಡರಾಯಪೇಟೆ ಗ್ರಾಮಕ್ಕೆ ಭೇಟಿ ನೀಡಿ ಅಲ್ಲಿನ ಹಿರಿಯ ಪ್ರಾಥಮಿಕ ಶಾಲೆಯ ಶೌಚಾಲಯ ಮತ್ತು ಅಡುಗೆ ಕೋಣೆ ಕಾಮಗಾರಿ ಸ್ಥಳದಲ್ಲಿ ಹಾಜರಾತಿ ಪರಿಶೀಲಿಸಿ, ಬಳಿಕ ಕಾರ್ಮಿಕರೊಂದಿಗೆ ಸಮಾಲೋಚನೆ ನಡೆಸಿ ಅವರು ಮಾತನಾಡಿದರು. ಗ್ರಾಮೀಣ ಭಾಗದಲ್ಲಿ ವಾಸಿಸುವ ಕೂಲಿ ಕಾರ್ಮಿಕರು ಉದ್ಯೋಗಕ್ಕಾಗಿ ನಗರ ಪ್ರದೇಶಗಳಿಗೆ ವಲಸೆ ಹೋಗುವುದನ್ನು ತಡೆಯುವಲ್ಲಿ ವಿಕಸಿತ ಭಾರತ-ಗ್ಯಾರಂಟಿ ಫಾರ್ ರೋಜ್ ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) (ವಿಬಿ-ಜಿ ರಾಮ್ ಜಿ) ಯೋಜನೆಯು ಮಹತ್ವದ ಪಾತ್ರವಹಿಸುತ್ತದೆ. ಗ್ರಾಮೀಣ ಜನರ ಆರ್ಥಿಕ ಸ್ವಾವಲಂಬನೆ ಹಾಗೂ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಸಹಕಾರಿಯಾಗಿದೆ. ಸಮುದಾಯದ ಸಹಯೋಗದೊಂದಿಗೆ ಗ್ರಾಮಗಳ ಸರ್ವಾಂಗಿಣ ಅಭಿವೃದ್ಧಿಗೆ ಮುಕ್ತ ಅವಕಾಶ ಕಲ್ಪಿಸುವ ಈ ಯೋಜನೆಯನ್ನು ಪ್ರತಿಯೊಬ್ಬರೂ ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಿಇಒ ಅವರು ತಿಳಿಸಿದರು.

## ಮಾಗಡಿಯಲ್ಲಿ ಮತದಾರರ ವಿಶೇಷ ಪರಿಷ್ಕರಣೆ, ದಾಖಲೆ ಪರಿಶೀಲನೆ

• ಉದಯವಾಹಿನಿ, ಮಾಗಡಿ

ಪಟ್ಟಣದ ಹೊಸಪೇಟೆ ಸರ್ಕಾರಿ ಶಾಲಾ ಆವರಣದಲ್ಲಿ ಮತದಾರರ ವಿಶೇಷ ಪರಿಷ್ಕರಣೆ (ಎಸ್ಐಆರ್) ಅಡಿಯಲ್ಲಿ ಕೈಬಿಡಲಾಗಿದ್ದ ಮತದಾರರಿಗೆ ಸಂಬಂಧಿಸಿದ ದಾಖಲಾತಿಗಳ ಪರಿಶೀಲನಾ ಕಾರ್ಯ ನಡೆಯಿತು.2022ರಲ್ಲಿ ಮತ ಚಲಾಯಿಸಿದ್ದರೂ ಎಸ್ಐಆರ್ ಪಟ್ಟಿಯಲ್ಲಿ ಹೆಸರು ಬಿಟ್ಟುಹೋಗಿದ್ದ ಮತದಾರರಿಗೆ ಸೂಕ್ತ ದಾಖಲೆಗಳನ್ನು ಸಲ್ಲಿಸುವಂತೆ ಈಗಾಗಲೇ ನೋಟಿಸ್ ಜಾರಿ ಮಾಡಲಾಗಿತ್ತು. ಅದರಂತೆ ದಾಖಲಾತಿಗಳ ಪರಿಶೀಲನೆ ಮಾಡಲಾಯಿತು. ಒಟ್ಟು 4 ಮತಗಟ್ಟೆಗಳಲ್ಲಿ 90 ಮತದಾರರ ಹೆಸರು ಬಿಟ್ಟುಹೋಗಿದ್ದು, ಸೂಕ್ತ ದಾಖಲೆಗಳನ್ನು ಒದಗಿಸಿದ 65 ಮತದಾರರ ವಿವರಗಳನ್ನು ಸ್ಥಳದಲ್ಲೇ ಪರಿಶೀಲಿಸಿ ಸರಿಪಡಿಸಲಾಯಿತು.ನಗರ ಯೋಜನಾ ಪ್ರಾಧಿಕಾರದ ಮುಖ್ಯಾಧಿಕಾರಿ ಹಾಗೂ ಚುನಾವಣಾಧಿಕಾರಿ ಮಹದೇವ ಪ್ರಸಾದ್ ನೇತೃತ್ವದಲ್ಲಿ ಪರಿಶೀಲನೆ ನಡೆಯಿತು. ಬಿಎಲ್‌ಒಗಳಾದ ನಾಗರಾಜ್ ಎಂ. ಶ್ವೇತಾ, ಮಮತಾ, ನಾಗರಾಜ್ ಪಾಲ್ಗೊಂಡಿದ್ದರು.

## ಮನವಿಗೆ ಸ್ಪಂದಿಸದ ಅಧಿಕಾರಿಗಳ ವಿರುದ್ಧ ಕಿಡಿ

• ಉದಯವಾಹಿನಿ, ತಿಪಟೂರು

ತಾಲ್ಲೂಕಿನ ಬಿದರೆಗುಡಿ ಗ್ರಾಮದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ನಿರ್ಮಿಸಿರುವ ರಸ್ತೆ ಹದಗೆಟ್ಟಿದ್ದು, ಸಂಚಾರಕ್ಕೆ ತೀವ್ರ ತೊಂದರೆಯಾಗಿದೆ. ಗುಂಡಿ ಬಿದ್ದಿರುವ ರಸ್ತೆಯನ್ನು ತಕ್ಷಣವೇ ದುರಸ್ತಿ ಮಾಡುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ. ಬಿದರೆಗುಡಿ ವೃತ್ತವು ಸುತ್ತಮುತ್ತಲಿನ ಹತ್ತಕ್ಕೂ ಹೆಚ್ಚು ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ಕೇಂದ್ರ. ವಿದ್ಯಾರ್ಥಿಗಳು, ರೈತರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರು ವಿವಿಧ ಕೆಲಸಗಳಿಗಾಗಿ ಬಿದರೆಗುಡಿಗೆ ಬಂದು ಹೋಗುವುದರಿಂದ, ಇಲ್ಲಿ ಸದಾಕಾಲ ಜನದಟ್ಟಣೆ, ವಾಹನ ದಟ್ಟಣೆ ಇರುತ್ತದೆ.

ಬಿದರೆಗುಡಿಯಲ್ಲಿ ನಡೆಯುವ ದಿನಸಿ, ತರಕಾರಿ ಹಾಗೂ ವಿವಿಧ ವಸ್ತುಗಳ ವಾರದ ಸಂತೆಯಲ್ಲಿ ಲಕ್ಷಾಂತರ ರೂಪಾಯಿಗಳ ವಹಿವಾಟು ನಡೆಯುತ್ತದೆ. ಭಾನುವಾರದಂದು ದಟ್ಟಣೆ ಮತ್ತಷ್ಟು ಹೆಚ್ಚುತ್ತದೆ. ವಾಹನ ದಟ್ಟಣೆ ಹೆಚ್ಚಿರುವ ಕಾರಣ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ನಿರ್ಮಿಸಿರುವ ರಸ್ತೆಯಲ್ಲಿ ಗುಂಡಿಗಳು ಬಿದ್ದಿವೆ.

# ಸತೀಶ್ ಜಾರಕಿಹೊಳಿ ನಿವಾಸದ ಮೇಲೆ ಇಡಿ ಶೋಧನೆ ದುರುದ್ದೇಶಪೂರಿತ: ಗೋವಿನಾಯಕ್

## ರಾಜ್ಯ ರಾಜಕಾರಣದಲ್ಲಿ ತಮ್ಮದೇ ಆದ ಪ್ರಭಾವ ಹೊಂದಿರುವ ಅವರು ಭವಿಷ್ಯದಲ್ಲಿ ಮುಖ್ಯಮಂತ್ರಿಯಾಗುವ ಸಾಮರ್ಥ್ಯ ಹಾಗೂ ಜನಬೆಂಬಲ

• ಉದಯವಾಹಿನಿ, 'ಗುಂಡ್ಲುಪೇಟೆ

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ನಿವಾಸದಲ್ಲಿ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ನಡೆಸಿರುವ ಶೋಧ ಕಾರ್ಯಾಚರಣೆ ಖಂಡನೀಯವಾಗಿದ್ದು, ರಾಜ್ಯದಲ್ಲಿ ಪ್ರಬಲ ರಾಜಕೀಯ ಶಕ್ತಿಯಾಗಿ ಬೆಳೆಯುತ್ತಿರುವ ಸತೀಶ್ ಜಾರಕಿಹೊಳಿ ಅವರ ವರ್ಚಸ್ಸನ್ನ ಕುಂದಿಸುವ ಉದ್ದೇಶದಿಂದ ವ್ಯವಸ್ಥಿತ ಷಡ್ಯಂತ್ರ ನಡೆಸಲಾಗುತ್ತಿದೆ ಎಂದು ಜಾರಕಿಹೊಳಿ ಬ್ರಿಗೇಡ್ ಸಂಸ್ಥಾಪಕ ಅಧ್ಯಕ್ಷ ಗೋವಿನಾಯಕ್ ಆರೋಪಿಸಿದರು.

1 ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿ

2 ಗಣಿಗಾರಿಕೆ ನಡೆಸಲು 750 ಕೋಟಿ ಹಣ ಹೂಡಿಕೆ

3 ಮಾಹಿತಿಗಳಿಗೆ ಯಾವುದೇ ದೃಢವಾದ ಆಧಾರವಿಲ್ಲ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಸತೀಶ್ ಜಾರಕಿಹೊಳಿ ಅವರು ವಾಲ್ಮೀಕಿ ಸಮುದಾಯದ ಮೇರು ನಾಯಕರಾಗಿದ್ದು, ಅಹಿಂದ ವರ್ಗದ ಪ್ರಬಲ ಧ್ವನಿಯಾಗಿ ಗುರುತಿಸಿಕೊಂಡಿದ್ದಾರೆ. ರಾಜ್ಯ ರಾಜಕಾರಣದಲ್ಲಿ ತಮ್ಮದೇ ಆದ ಪ್ರಭಾವ ಹೊಂದಿರುವ ಅವರು ಭವಿಷ್ಯದಲ್ಲಿ ಮುಖ್ಯಮಂತ್ರಿಯಾಗುವ ಸಾಮರ್ಥ್ಯ ಹಾಗೂ ಜನಬೆಂಬಲ ಹೊಂದಿದ್ದಾರೆ. ಇಂತಹ ನಾಯಕನನ್ನ ಉದ್ದೇಶಪೂರ್ವಕವಾಗಿ ಗುರಿಯಾಗಿಸಿ ಅವರ ರಾಜಕೀಯ


ಉದಯವಾಹಿನಿ ಚಿತ್ರ

ವರ್ಚಸ್ಸಿಗೆ ಧಕ್ಕೆ ತರುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು. ಸತೀಶ್ ಜಾರಕಿಹೊಳಿ ಅವರ ಪುತ್ರ ಹಾಗೂ ಪುತ್ರಿ ವಿದೇಶದಲ್ಲಿ ಗಣಿಗಾರಿಕೆ ನಡೆಸಲು 750 ಕೋಟಿ ಹಣ ಹೂಡಿಕೆ ಮಾಡಿದ್ದಾರೆ ಎಂಬ ರೀತಿಯಲ್ಲಿ ಹರಿದಾಡುತ್ತಿರುವ ಆರೋಪಗಳು ಸಂಪೂರ್ಣ ಸುಳ್ಳು ಹಾಗೂ ಸತ್ಯಕ್ಕೆ ದೂರವಾದವು , ಸದ್ಯ ಸಾಮಾಜಿಕ ಜಾಲತಾಣಗಳು ಹಾಗೂ ವಿವಿಧ ವಲಯಗಳಲ್ಲಿ ಹರಿದಾಡುತ್ತಿರುವ ಹಲವು ಮಾಹಿತಿಗಳಿಗೆ ಯಾವುದೇ ದೃಢವಾದ ಆಧಾರವಿಲ್ಲ. ವದಂತಿಗಳನ್ನ ನಂಬಿ ಸಾರ್ವಜನಿಕರು ಗೊಂದಲಕ್ಕೊಳಗಾಗಬಾರದು ಎಂದರು.

ಶೋಧ ಕಾರ್ಯಾಚರಣೆಗೆ ಮುನ್ನವೇ ಇಡಿ ಅಧಿಕಾರಿಗಳು ನೋಟಿಸ್ ನೀಡಿ, ತನಿಖೆಗೆ ಸಹಕರಿಸುವಂತೆ ಕೋರಿದ್ದರು. ಅವರ ಮನವಿಗೆ ಸ್ಪಂದಿಸಿ ಶೋಧನೆಗೆ ಅವಕಾಶ ಮಾಡಿಕೊಡಲಾಗಿದೆಯೇ ಹೊರತು, ಇದನ್ನ ದಾಳಿ ಎಂದು ಕರೆಯುವುದು ಸರಿಯಲ್ಲ ಎಂದು ಗೋವಿನಾಯಕ್ ಹೇಳಿದರು. ಮನೆಯಲ್ಲಿ ಕೋಟಿ ಕೋಟಿ ರೂಪಾಯಿ ಹಣ ಪತ್ತೆಯಾಗಿದ್ದು, ಎಲ್ಲಾ ಹಣವನ್ನೂ ವಶಪಡಿಸಿಕೊಳ್ಳಲಾಗಿದೆ ಎಂಬ ರೀತಿಯಲ್ಲಿ ಹರಿದಾಡುತ್ತಿರುವ ಸುದ್ದಿಗಳೂ ಆಧಾರರಹಿತ ವದಂತಿಗಳಾಗಿವೆ ಎಂದು ಅವರು ತಿಳಿಸಿದರು. ಸತೀಶ್ ಜಾರಕಿಹೊಳಿ ಅವರು ರಾಜ್ಯದ ವಿವಿಧ ಪಕ್ಷಗಳ ಮುಖಂಡರೊಂದಿಗೆ ಉತ್ತಮ ಒಡನಾಟ ಹೊಂದಿರುವ ನಾಯಕರು. ರಾಜಕೀಯ ಭಿನ್ನಾಭಿಪ್ರಾಯಗಳಿದ್ದರೂ ಯಾರಿಗೂ ಕೇಡು ಬಯಸುವ ವ್ಯಕ್ತಿಯಲ್ಲ. ಜನಪರ ಹಾಗೂ ಸಾಮಾಜಿಕ ಹೋರಾಟಗಳ ಮೂಲಕ ತಮ್ಮದೇ ಆದ ರಾಜಕೀಯ ನೆಲೆಯನ್ನ ನಿರ್ಮಿಸಿಕೊಂಡಿರುವ ಅವರನ್ನ ದುರ್ಬಲಗೊಳಿಸುವ ಪ್ರಯತ್ನವನ್ನ ಜನತೆ ಅರ್ಥಮಾಡಿಕೊಳ್ಳಬೇಕು ಎಂದು ಹೇಳಿದರು.

ಯಾವುದೇ ತನಿಖೆ ಕಾನೂನುಬದ್ಧವಾಗಿ ನಡೆಯುವುದಕ್ಕೆ ತಮ್ಮ ವಿರೋಧವಿಲ್ಲ. ಆದರೆ ತನಿಖೆಯ ಹೆಸರಿನಲ್ಲಿ ರಾಜಕೀಯ ಉದ್ದೇಶ ಸಾಧಿಸುವ ಪ್ರಯತ್ನ ನಡೆದರೆ ಅದನ್ನು ಖಂಡಿಸುವುದಾಗಿ ಹೇಳಿದರು. ಸತೀಶ್ ಜಾರಕಿಹೊಳಿ ಅವರ ವಿರುದ್ಧ ಹರಿದಾಡುತ್ತಿರುವ ಆರೋಪಗಳ ಕುರಿತು ಸಂಪೂರ್ಣ ಸತ್ಯಾಸತ್ಯತೆ ಹೊರಬರಬೇಕು. ತನಿಖಾ ಸಂಸ್ಥೆಗಳು ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ಆಧಾರವಿಲ್ಲದ ಆರೋಪಗಳು ಹಾಗೂ ವದಂತಿಗಳ ಮೂಲಕ ವ್ಯಕ್ತಿಯ ಮತ್ತು ಕುಟುಂಬದ ಗೌರವಕ್ಕೆ ಧಕ್ಕೆ ತರುವ ಪ್ರಯತ್ನ ಮಾಡಬಾರದು ಎಂದು ಮುಖಂಡರು ಒತ್ತಾಯಿಸಿದರು. ತನಿಖೆ ತನ್ನದೇ ಆದ ಕಾನೂನು ಪ್ರಕ್ರಿಯೆಯಂತೆ ನಡೆಯಲಿ ಆದರೆ ಅದನ್ನು ರಾಜಕೀಯವಾಗಿ ಬಳಸಿಕೊಂಡು ಜಾರಕಿಹೊಳಿ ಅವರ ವರ್ಚಸ್ಸಿಗೆ ಧಕ್ಕೆ ತರುವ ಪ್ರಯತ್ನವನ್ನ ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ವಾಲ್ಮೀಕಿ ಸಮುದಾಯ ಮುಖಂಡರಾದ ರಾಜೇಂದ್ರ, ನಾಯಕ್, ಪ್ರದೀಪ್, ಜಾರಕಿಹೊಳಿ ಬ್ರಿಗೇಡ್ ಸದಸ್ಯರಾದ ರವಿ, ದನುಗೌಡ, ಮನಸ್ ಇತರರು ಹಾಜರಿದ್ದರು.

### ಅಗತ್ಯ ದಾಖಲೆ ಲಭ್ಯ

**ಇಡಿ ಅಧಿಕಾರಿಗಳು ನಡೆಸಿರುವ ಶೋಧ ಕಾರ್ಯಾಚರಣೆಯನ್ನ ಕೆಲವರು 'ದಾಳಿ' ಎಂಬ ರೀತಿಯಲ್ಲಿ ಬಿಂಬಿಸುತ್ತಿರುವುದು ಸರಿಯಲ್ಲ. ಇಡಿ ಶೋಧನೆಗೂ ಹಾಗೂ ತನಿಖೆಯ ಸಂದರ್ಭದಲ್ಲಿ ಅನುಮಾನಾಸ್ಪದ ಅಂಶಗಳ ಪರಿಶೀಲನೆಗೂ ಸಾಕಷ್ಟು ವ್ಯತ್ಯಾಸವಿದೆ. ಅಧಿಕಾರಿಗಳು ತನಿಖೆಯ ಭಾಗವಾಗಿ ಮನೆಯಲ್ಲಿದ್ದ ಹಣ ಹಾಗೂ ಇತರೆ ದಾಖಲೆಗಳನ್ನ ಪರಿಶೀಲನೆಗಾಗಿ ಕೊಂಡೊಯ್ದಿದ್ದಾರೆ. ದೊರೆತಿರುವ ಹಣಕ್ಕೆ ಸಂಬಂಧಿಸಿದಂತೆ ಅಗತ್ಯ ದಾಖಲೆಗಳು ಲಭ್ಯವಿದ್ದು, ಅವುಗಳ ಮೂಲವನ್ನ ಸ್ಪಷ್ಟಪಡಿಸಲು ಸಾಧ್ಯವಿದೆ. ಆದ್ದರಿಂದ ಈ ವಿಚಾರವನ್ನ ಬೇರೆ ರೀತಿಯಲ್ಲಿ ಬಿಂಬಿಸಿ ಜನರಲ್ಲಿ ಗೊಂದಲ ಮೂಡಿಸಬಾರದು ಎಂದು ಮನವಿ ಮಾಡಿದರು.**

**ನಾಗೇಂದ್ರ, ಸತೀಶ್ ಜಾರಕಿಹೊಳಿ ಅವರ ವಿರುದ್ಧ ನಡೆಯುತ್ತಿರುವ ಬೆಳವಣಿಗೆಗಳು ಕೇಂದ್ರ ಸರ್ಕಾರದ ವ್ಯವಸ್ಥಿತ ಪಿತೂರಿಯ ಭಾಗವಾಗಿದೆ ಎಂದು ಆರೋಪಿಸಿದರು. ಹಿಂದುಳಿದ, ದಲಿತ ಹಾಗೂ ಅಹಿಂದ ಸಮುದಾಯಗಳ ಪರವಾಗಿ ಪ್ರಬಲವಾಗಿ ಧ್ವನಿ ಎತ್ತುತ್ತಿರುವ ನಾಯಕನನ್ನ ರಾಜಕೀಯವಾಗಿ ಹತ್ತಿಕ್ಕುವ ಪ್ರಯತ್ನ ನಡೆಯುತ್ತಿದೆ.**
**ಶ್ರೀನಿವಾಸ್ ಕಣ್ಣಪ್ಪ ಮುಖಂಡ**

## ಮಿನಿ ನ್ಯೂಸ್

### ಮಳೆ ಕೊರತೆ, ಬಿಸಿಲಿನ ತಾಪಕ್ಕೆ ಒಣಗಿದ ರಾಗಿ ಬೆಳೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಹುಳಿಯಾರು

ಹೋಬಳಿಯಲ್ಲಿ ಬಿತ್ತನೆಯಾಗಿದ್ದ ರಾಗಿ ಬೆಳೆ ತೀವ್ರ ಮಳೆ ಕೊರತೆ ಹಾಗೂ ಬಿಸಿಲ ತಾಪಕ್ಕೆ ಸಂಪೂರ್ಣ ಒಣಗಿ ಹೋಗಿದೆ. ಗೌರಿ-ಗಣೇಶ ಹಬ್ಬ ಸಮೀಪಿಸುತ್ತಿದ್ದು, ಈ ವೇಳೆಗೆ ರಾಗಿ, ನವಣೆ ತೆನೆಯಾಗಬೇಕಿತ್ತು. ಅಕ್ಕಡಿಯಲ್ಲಿ ಬೆಳೆಯುವ ತೊಗರಿ, ಹುಚ್ಚೆಳ್ಳು, ಅಲಸಂದೆಯಲ್ಲಿ ಹೂವು ಬಿಡಬೇಕಾಗಿತ್ತು.

ವಾತಾವರಣದಲ್ಲಿ ತೇವಾಂಶದ ಕೊರತೆಯಿಂದ ದಿನದಿಂದ ದಿನಕ್ಕೆ ಬೆಳೆ ಒಣಗುತ್ತಿದೆ. ಬಿತ್ತನೆ ಪ್ರಮಾಣ ಕಡಿಮೆಯಾಗಿದ್ದು, ಮಳೆ ನಂಬಿ ಬಿತ್ತನೆ ಮಾಡಿದ್ದ ಕೆಂಕೆರೆ, ಕಂಪನಹಳ್ಳಿ, ನಂದಿಹಳ್ಳಿ, ದೊಡ್ಡಬಿದರೆ, ಚಿಕ್ಕಬಿದರೆ ಗ್ರಾಮಗಳಲ್ಲಿ ರಾಗಿ ಬೆಳೆ ಸಂಪೂರ್ಣ ಒಣಗಿದೆ. ದಸೂಡಿ, ಗಾಣಧಾಳು, ಹೊಯ್ಸಳಕಟ್ಟೆ ಭಾಗದಲ್ಲಿ ಬಿತ್ತನೆಯೇ ಆಗಿಲ್ಲ. ಮಳೆ ಕಾಯುತ್ತ ಬಿತ್ತನೆ ಬೀಜ ಇಟ್ಟಲ್ಲಿಯೇ ಹುಳು ಬಿದ್ದಿದೆ ಎನ್ನುತ್ತಾರೆ ರೈತರು.

ರಾಸುಗಳು ಮೇವಿನ ಕೊರತೆಯಿಂದ ಬಳಲುತ್ತಿವೆ. ಕಳೆದ ವರ್ಷ ಕೂಡ ಉತ್ತಮ ಮಳೆಯಾಗದೆ ಮೇವಿಗೆ ಕೊರತೆ ಎದುರಾಗಿದ್ದು, ರೈತರ ಬಳಿ ಸದ್ಯ ಮೇವಿನ ದಾಸ್ತಾನು ಇಲ್ಲವಾಗಿದೆ. ಕೊಳವೆಬಾವಿಗಳು ಕೂಡ ಬತ್ತಿದ್ದು ಬೆಳೆ ಬೆಳೆಯುವುದು ಇರಲಿ, ಕುಡಿಯುವ ನೀರಿಗೂ ಬಿಕ್ಕಟ್ಟು ಸೃಷ್ಟಿಯಾಗಿದೆ. ಬಹುತೇಕ ಹಳ್ಳಿಗಳಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುತ್ತಿದ್ದು ಮುಂದಿನ ದಿನಗಳಲ್ಲಿ ತೀವ್ರತೆ ಇನ್ನಷ್ಟು ಹೆಚ್ಚಲಿದೆ ಎಂದು ಜನರು ಆತಂಕ ವ್ಯಕ್ತಪಡಿಸುತ್ತಾರೆ.ಬೆಳಗಿನ ವೇಳೆ ಮಳೆಯ ಮುನ್ಸೂಚನೆಯಿದ್ದು, ಸಂಜೆಗೆ ಸಂಪೂರ್ಣ ಕರಗಿ ಹೋಗುತ್ತದೆ ಎಂದು ರೈತ ಸೋಮನಹಳ್ಳಿ ಕ್ಯಾತಯ್ಯ ಬೇಸರ ವ್ಯಕ್ತಪಡಿಸಿದರು.

### ತಮಿಳುನಾಡಿಗೆ ಕಾವೇರಿ ನೀರು ಬಿಡಬಾರದು -ಶಾಸಕ ರಮೇಶ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಶ್ರೀರಂಗಪಟ್ಟಣ

ಇನ್ನು ಮುಂದೆ ತಮಿಳುನಾಡಿಗೆ ಕಾವೇರಿ ನೀರು ಬಿಡಬಾರದು ಎಂದು ಜಿಲ್ಲೆಯ ಸಚಿವರು ಮತ್ತು ಶಾಸಕರು ಮುಖ್ಯಮಂತ್ರಿ ಅವರಿಗೆ ಒಕ್ಕೊರಲಿನಿಂದ ಮನವಿ ಮಾಡಿದ್ದೇವೆ' ಎಂದು ಶಾಸಕ ರಮೇಶ ಬಂಡಿಸಿದ್ದೇಗೌಡ ಹೇಳಿದರು. ನ್ಯಾಯಾಂಗದ ವ್ಯವಸ್ಥೆಗೆ ಗೌರವ ಕೊಡುವ ಉದ್ದೇಶದಿಂದ ಸಂಕಷ್ಟದ ಸ್ಥಿತಿಯಲ್ಲೂ ಇಷ್ಟು ದಿನ ನೀರು ಹರಿಸಲಾಗಿದೆ. ಕಾವೇರಿ ಕೊಳ್ಳದ ಜಲಾಶಯಗಳಲ್ಲಿ ಇರುವ ನೀರು ಕುಡಿಯುವುದಕ್ಕೂ ಸಾಲುವುದಿಲ್ಲ. ಪ್ರತಿ ದಿನ 6 ಸಾವಿರ ಕ್ಯುಸೆಕ್ ನೀರು ಹರಿಸಬೇಕು ಎಂಬ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ನಿರ್ದೇಶನ ಅವೈಜ್ಞಾನಿಕವಾಗಿದ್ದು, ರಾಜ್ಯಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಈ ಬಗ್ಗೆ ಪ್ರಶ್ನಿಸಲಿದೆ. ಸುಪ್ರೀಂ ಕೋರ್ಟ್‌ನಿಂದಲೂ ರಾಜ್ಯಕ್ಕೆ ವ್ಯತಿರಿಕ್ತವಾದ ಆದೇಶ ಬಂದರೆ ಕಾವೇರಿ ಕಣಿವೆಯ ಸಚಿವರು ಮತ್ತು ಶಾಸಕರು ತಕ್ಷಣ ಸಭೆ ನಡೆಸಲಿದ್ದೇವೆ. ರೈತರು ಮತ್ತು ಸಾರ್ವಜನಿಕರ ಜತೆ ನಿಲ್ಲುತ್ತೇವೆ ಎಂದು ಸುದ್ದಿಗಾರರಿಗೆ ತಿಳಿಸಿದರು.

ಕೇಂದ್ರ ಸರ್ಕಾರ ಇಡಿ, ಐಟಿ, ಸಿಬಿಐಗಳನ್ನು ಬಳಸಿಕೊಂಡು ತಮ್ಮ ರಾಜಕೀಯ ವಿರೋಧಿಗಳನ್ನು ಹಣಿಯುವ ಕೆಲಸ ಮಾಡುತ್ತಿದೆ. ಕೆಪಿಎಸ್‌ಸಿ ನೇಮಕಾತಿಯಲ್ಲಿ ನಡೆದಿರುವ ಅಕ್ರಮಕ್ಕೆ ಬಿಜೆಪಿಯೇ ಕಾರಣ. ಆ ಪಕ್ಷದ ಸರ್ಕಾರ ಇದ್ದಾಗ ನೇಮಕಗೊಂಡ ಅಧ್ಯಕ್ಷರು, ಸದಸ್ಯರು ಮತ್ತು ಅಧಿಕಾರಿಗಳು ಪ್ರಕರಣದ ಮುಖ್ಯ ಆರೋಪಿಗಳಾಗಿದ್ದಾರೆ' ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು. ನೆಹರೂ ಮತ್ತು ಮನಮೋಹನ ಸಿಂಗ್ ನೇತೃತ್ವದ ಸರ್ಕಾರಗಳಿಗೆ ಹೋಲಿಸಿದರೆ ನರೇಂದ್ರ ಮೋದಿ ಅವರ ಸರ್ಕಾರ ಹೆಚ್ಚು ಸಾಲ ಮಾಡಿದೆ. ದೇವರು, ಧರ್ಮದ ಹೆಸರಿನಲ್ಲಿ ಅಮಾಯಕರ ಭಾವನೆ ಕೆರಳಿಸಿ ರಾಜಕೀಯ ಲಾಭಪಡೆಯುತ್ತಿದೆ.

### ಮುಳಬಾಗಿಲು: ಬಸ್ ನಿಲ್ದಾಣದಲ್ಲಿ ಖಾಸಗಿ ವಾಹನಗಳ ದರ್ಬಾರ್



ಉದಯವಾಹಿನಿ ಚಿತ್ರ

• ಉದಯವಾಹಿನಿ, ಮುಳಬಾಗಿಲು

ಸರ್ಕಾರಿ ಬಸ್ ಮತ್ತು ಸಾರ್ವಜನಿಕರ ಅನುಕೂಲಕ್ಕಾಗಿ ನಿರ್ಮಿಸಿರುವ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣವು ಖಾಸಗಿ ವಾಹನಗಳ ನಿಲ್ದಾಣದಂತೆ ಭಾಸವಾಗುತ್ತಿದೆ. ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಖಾಸಗಿ ವಾಹನಗಳ ಪ್ರವೇಶಕ್ಕೆ ಅನುಮತಿ ಇಲ್ಲ ಎಂಬ ನಾಮಫಲಕವು ಕೇವಲ ನಾಮಕಾವಸ್ಥೆಗೆ ಎಂಬಂತೆ ಕಂಡುಬರುತ್ತಿದೆ. ನಗರದಲ್ಲಿ ಅತಿ ಕಿರಿದಾದ ಸ್ಥಳದಲ್ಲಿ ಸಾರಿಗೆ ಸಂಸ್ಥೆ ಬಸ್ ನಿಲ್ದಾಣವನ್ನು ಅವೈಜ್ಞಾನಿಕವಾಗಿ ನಿರ್ಮಾಣ ಮಾಡಲಾಗಿದೆ. ಖಾಸಗಿ ಬಸ್‌ಗಳ ನಿಲುಗಡೆಗೆ ಪ್ರತ್ಯೇಕವಾದ ನಿಲುಗಡೆ ಇಲ್ಲವಾದ್ದರಿಂದ ಖಾಸಗಿ ಬಸ್‌ಗಳು ಇಲ್ಲಿಯೇ ನಿಲ್ಲುತ್ತಿವೆ. ಇದರಿಂದಾಗಿ ಸಣ್ಣ ಬಸ್ ನಿಲ್ದಾಣದಲ್ಲಿ ಸದಾ ವಾಹನಗಳ ದಟ್ಟಣೆ ಹೆಚ್ಚಿರುತ್ತದೆ. ಇದರಿಂದ ಸರ್ಕಾರಿ ಬಸ್ ಪ್ರಯಾಣಿಕರಿಗೆ ತೊಂದರೆಯಾಗಿದೆ. ಮುಳಬಾಗಿಲು ನಗರ ರಾಷ್ಟ್ರೀಯ ಹೆದ್ದಾರಿ 75ಕ್ಕೆ ಹೊಂದಿಕೊಂಡಿದ್ದು ಹಾಗೂ ಆಂಧ್ರಪ್ರದೇಶ ಮತ್ತು ಕರ್ನಾಟಕ ರಾಜಧಾನಿ ಬೆಂಗಳೂರಿಗೆ ಸಂಪರ್ಕ ಕೊಂಡಿಯಾಗಿರುವ ಕಾರಣ ಮುಳಬಾಗಿಲು ಬಸ್ ನಿಲ್ದಾಣ ಸದಾ ಜನಜಂಗುಳಿ ಮತ್ತು ವಾಹನಗಳ ದಟ್ಟಣೆಯಿಂದ ಕೂಡಿರುತ್ತದೆ.

ಜೊತೆಗೆ ಖಾಸಗಿ ಬಸ್‌ಗಳಿಗೆ ಪ್ರತ್ಯೇಕ ನಿಲ್ದಾಣ ಇಲ್ಲದ ಕಾರಣ ಸಮಸ್ಯೆ ಮತ್ತಷ್ಟು ಬಿಗಡಾಯಿಸಿದೆ ಎನ್ನುತ್ತಾರೆ ಪ್ರಯಾಣಿಕರು. ನಗರದ ಆಂಜನೇಯ ದೇವಾಲಯದ ಹಿಂಭಾಗ ಹಾಗೂ ತಾಲ್ಲೂಕಿನ ಮುಖ್ಯ ಕಚೇರಿಗೆ ಹೋಗುವ ಮುಖ್ಯ ರಸ್ತೆ ಪಕ್ಕ ಇರುವ ಬಸ್ ನಿಲ್ದಾಣದ ಮೂಲಕ ಪ್ರತಿನಿತ್ಯ ನೂರಾರು ವಾಹನಗಳು ಸಂಚರಿಸುತ್ತವೆ. ಅತಿಕಿರಿದಾದ ಬಸ್ ನಿಲ್ದಾಣದಲ್ಲಿ ಸಾರಿಗೆ ಸಂಸ್ಥೆ ಬಸ್ಸು ನಿಲ್ಲಿಸಲು ಸ್ಥಳಾವಕಾಶ ಇಲ್ಲ.

### ಪ್ಲಾಸ್ಟಿಕ್ ಮುಕ್ತ ನಗರಕ್ಕೆ ಒತ್ತು - ಕೆ.ಶೇಷಾದ್ರಿ

• ಉದಯವಾಹಿನಿ, ರಾಮನಗರ

ನಗರದಲ್ಲಿ ಉತ್ತಮ ಪರಿಸರ ನಿರ್ಮಾಣಕ್ಕಾಗಿ ಪ್ಲಾಸ್ಟಿಕ್ ಮುಕ್ತ ನಗರಕ್ಕೆ ನಗರಸಭೆ ಒತ್ತು ನೀಡುತ್ತಿದ್ದು ಇದರ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಬಟ್ಟೆ ಬ್ಯಾಗುಗಳ ಯಂತ್ರಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ನಗರಸಭೆ ಅಧ್ಯಕ್ಷ ಕೆ.ಶೇಷಾದ್ರಿ ಹೇಳಿದರು.


ಉದಯವಾಹಿನಿ ಚಿತ್ರ

ನಗರದ ಹಲವೆಡೆ ಪೇಪರ್ ಬ್ಯಾಗುಗಳ ಬೂತ್ ಯಂತ್ರಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಇಂದಿನ ಯಾಂತ್ರಿಕ ಬದುಕಿನ ಜನರ ಜೀವನದಲ್ಲಿ ಪ್ಲಾಸ್ಟಿಕ್ ಬಳಕೆ ತಪ್ಪಿಸುವುದು ಕಷ್ಟದ ಕೆಲಸವಾಗಿದ್ದು, ಪ್ಲಾಸ್ಟಿಕ್ ಮಾರಾಟಗಾರರ ಮೇಲೆ ದಂಡ ವಿಧಿಸುವುದರಿಂದ ಯಾವುದೆ ಪ್ರಯೋಜನ ಆಗುವುದಿಲ್ಲ. ಆದ್ದರಿಂದ ಗಣನೀಯವಾಗಿ ಬಳಕೆ ಕಡಿಮೆ ಮಾಡುವ ಬಗ್ಗೆ ಜನಸಾಮಾನ್ಯರಲ್ಲಿ ಅರಿವು ಮೂಡಿಸಲು ಪ್ರಯತ್ನಿಸಲಾಗುತ್ತಿದ್ದು ಆರೋಗ್ಯ ಪೂರ್ಣ ಸಮಾಜ ನಿರ್ಮಾಣಕ್ಕೆ ಒತ್ತು ನೀಡಲಾಗುತ್ತಿದೆ ಎಂದು ಹೇಳಿದರು. ಜನ ಸಂಸಣಿ ಸ್ಥಳಗಳು, ಎಪಿಎಂಸಿ ಮಾರುಕಟ್ಟೆ, ಬಸ್ ನಿಲ್ದಾಣ, ಶಿಕ್ಷಣ ಸಂಸ್ಥೆ, ಜನಸಂದಣಿ ವೃತ್ತಗಳು ಸೇರಿದಂತೆ ಸುಮಾರು ಎಂಟು ಕಡೆಗಳಲ್ಲಿ ಯಂತ್ರವನ್ನು ಅಳವಡಿಸಲಾಗುತ್ತಿದ್ದು, ಹತ್ತು ರೂಗಳ ಕಾಯಿನ್ ಹಾಕುವ ಮೂಲಕ ಬೂತ್ ಗಳಿಂದ ಗುಣಮಟ್ಟದ ಬಟ್ಟೆ ಬ್ಯಾಗುಗಳನ್ನು ಪಡೆಯಬಹುದಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು. ಪೌರಾಯುಕ್ತ ಡಾ.ಜಯಣ್ಣ, ನಗರಸಭೆ ಉಪಾಧ್ಯಕ್ಷೆ ಗಿರಿಜಮ್ಮ ಗುರುವೇಗೌಡ, ಸದಸ್ಯೆ ಪವಿತ್ರ, ಪ್ರಮುಖರಾದ ಲಕ್ಷ್ಮಿಪತಿ, ಚಂದ್ರಶೇಖರ್, ಧನಂಜಯ್ಯ ಮತ್ತಿತರರು ಉಪಸ್ಥಿತರಿದ್ದರು.

